


# ಸಿಹಿ ಕಹಿ

ಕನ್ನಡ ದಿನಪತ್ರಿಕೆ, ಬಾಗಲಕೋಟೆ

ಬಾಗಲಕೋಟೆಯಿಂದ ಪ್ರಕಟಿತ

RNI REG No. : KARKAN/2016/75068

SIHI KAHI

KANNADA DAILY MORNING

BAGALKOT

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ

Editor : MARUTI BASAVANTAPPA HOSAMANI

Cell : +91 9741319119

Volume : 06 Issue : 276 Friday 22-03-2024 E-mail : maruti.b.hosamani76@gmail.com Page: 4 Price : Rs. 1/-


## ವೀರಭದ್ರೇಶ್ವರ ರಥೋತ್ಸವ ಭಕ್ತರಿಂದ ವೀರಭದ್ರ ಸ್ವಾಮಿಗೆ ಹರಕೆ ಅರ್ಪಣೆ

**ಕೊಟ್ಟೂರು :** ಪಟ್ಟಣದ ಪುರದ ವೀರಭದ್ರೇಶ್ವರ ಸ್ವಾಮಿ ರಥೋತ್ಸವ ಜರುಗುವ ಶುಕ್ರವಾರ ದಂದು ಮುನ್ನದಿನವಾದ ಗುರುವಾರ ದಂದು ವಿವಿಧ ಬಗೆಯ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು. ಬೆಳಿಗ್ಗೆ ಗಂಗೆಯನ್ನು ಪೂಜೆಗೈದು ದೇವಸ್ಥಾನದ ಬಳಿ ಮಹಿಳೆಯರು ಮತ್ತು ಪುರುಷರು ಹೊತ್ತು ತರುತ್ತಿದ್ದಂತೆ ಅಗ್ನಿಗುಂಡ ಹಾಯುವ ಕಾರ್ಯಕ್ರಮ ಚಾಲನೆ ಪಡೆಯಿತು.



ದೇವರಿಗೆ ಹರಕೆಹೊತ್ತು ವೀರಭದ್ರೇಶ್ವರ ಸ್ವಾಮಿಯ ಭಕ್ತರು ಮಹಿಳೆಯರು ಎನ್ನದೆ ಒಬ್ಬರಾದ ಮೇಲೆ ಒಬ್ಬರಂತೆ ಸಣ್ಣ ಹೊಂಡದಲ್ಲಿ ಹಾಕಲಾಗಿದ್ದ ಅಗ್ನಿಯನ್ನು ತುಳಿದು ಭಕ್ತಿ ಸಮರ್ಪಿಸಿದರು. ಈ ಕಾರ್ಯಕ್ರಮದಲ್ಲಿ ಚಿಕ್ಕ ಮಕ್ಕಳು ಸಹ ಉತ್ಸಾಹದಿಂದ ಪಾಲ್ಗೊಂಡು ನಮಿಸಿದರು.

ಅಗ್ನಿ ಹಾಯುವ ಕಾರ್ಯಕ್ರಮದ ನಂತರ ವೀರಭದ್ರ ಸ್ವಾಮಿಯ ಹಲಗೆ ಮತ್ತು ಗುಗ್ಗಳದ ಮೆರವಣಿಗೆ ಪಟ್ಟಣದ ಕೊಟ್ಟೂರೇಶ್ವರ ದೇವಸ್ಥಾನದ ರಸ್ತೆ ಸೇರಿದಂತೆ ಇತರೆಡೆ ಸಾಗಿ-ತು.

ಈ ಸಂದರ್ಭದಲ್ಲಿ ವೀರಭದ್ರ ದೇವರನ್ನು ಮನೆ ದೇವರನ್ನಾಗಿಸಿ ಕೊಂಡ ಯುವಕರು ಮತ್ತು ಮಹಿಳೆಯರು ಚೂಪಾದ ದೊಡ್ಡ ಶಸ್ತ್ರ (ತಾಮ್ರದ ಸೂಜಿ)ಯನ್ನು ಯುವಕರು ಕಪಾಳಕ್ಕೆ ಚುಚ್ಚಿಸಿ ಕೊಂಡರೆ ಮಹಿಳೆಯರು ತಮ್ಮ ಕೈ ಮೇಲ್ಭಾಗದಲ್ಲಿ ಚುಚ್ಚಿಸಿ ಕೊಂಡು ಭಕ್ತಿ ಸಮರ್ಪಿಸಿದರು.

**ತಾಲೂಕ ವರದಿಗಾರರು ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಪ್ರದೀಪ್. ಕುಮಾರ್.ಸಿ ಕೊಟ್ಟೂರು**

## ಸಿಂಚನ ದೊಡಮನಿಗೆ ಕಿಡ್ನಿ ವೈಫಲ್ಯ ಸಹಾಯದ ಹಸ್ತಕ್ಕಾಗಿ ಮೊರೆ

**ಹೂವಿನ ಹಿಪ್ಪರಗಿ :** ವಿಜಯಪುರ ಜಿಲ್ಲೆಯ ಬಸವನ ಬಾಗೇವಾಡಿ ತಾಲೂಕಿನ ಹೂವಿನ ಹಿಪ್ಪರಗಿ ಗ್ರಾಮದ ಮಂಜುನಾಥ್ ದೊಡಮನಿ ಹಾಗೂ ಲಕ್ಷ್ಮಿ ದೊಡಮನಿ ಅವರ ಮಗಳಾದ ಸಿಂಚನ 11 ವರ್ಷ ವಯಸ್ಸು ಐದು ವರ್ಷದ ಹಿಂದೆ ಕಿಡ್ನಿ ವೈಫಲ್ಯ ಆಗಿತ್ತು.

ಟೆಂಪರರಿ ಡಯಾಲಿಸಿಸ್ ಮಾಡಿ ಕಿಡ್ನಿ ರಿಕವರಿ ಆಗಿತ್ತು.

ನಾವು ಸಾಲ ಮಾಡಿ ಚಿಕಿತ್ಸೆ ಕೊಡ್ಸಿದ್ದೇವೆ 2019 ರಿಂದ 2023 ಡಿಸೆಂಬರ್ ತನಕ ಮಾತ್ರೆಗಳ ಮೇಲೆ ಚಿಕಿತ್ಸೆ ನಡೆದಿತ್ತು.

ಈಗ ಜನವರಿಯಿಂದ ಡಯಾಲಿಸಿಸ್ ಮಾಡ್ಸಬೇಕು ಒಂದು ಸಲ ಡಯಾಲಿಸಿಸ್ ಮಾಡಿಸಿದರೆ ಐದು ಸಾವಿರ ರೂಪಾಯಿ ಖರ್ಚು ಬರ್ತಾ ಇದೆ ವಾರದಲ್ಲಿ ಎರಡು ಸಲ ಡಯಾಲಿಸಿಸ್ ಮಾಡ್ಸಬೇಕಂತ ಡಾಕ್ಟರ್ ಹೇಳಿದ್ದಾರೆ. ನಮಗೆ ವಾರದಲ್ಲಿ ಒಂದು ಸಾರಿ ಡಯಾಲಿಸಿಸ್ ಮಾಡಿಸುವ ಶಕ್ತಿ ನಮಗೆ ಇಲ್ಲ. ಮೊದಲು ಯಾರ ಬಳಿಯೂ ಸಹಾಯ ಕೇಳದೇ ನಿಭಾಯಿಸಿದ್ದೇವೆ. ಈಗ ಇರುವ ಒಬ್ಬ ಮಗಳು ಬದುಕು ಉಳಿಸಲು ಸಹಾಯಕ್ಕಾಗಿ ಮೊರೆ ಹೋಗಿದ್ದು, ಆದ್ದ-ರಿಂದ ತಾವು ಸಾರ್ವಜನಿಕರು ಸಂಘ-ಸಂಸ್ಥೆ ಅವರು ಈ ಪುಟ್ಟ ಬಾಲಕಿಯ ಜೀವ ಬದುಕಲಿಕ್ಕೆ ಹಣದ ಸಹಾಯ ಮಾಡಿ ಮತ್ತು ಮಾಡಿಸಿ ನಾವು ಬಡವರು ಕೂಲಿ ಜೀವನ ಸಾಗಿಸುತ್ತಿದ್ದೇವೆ .

ಈ 11 ವರ್ಷದ ಪುಟ್ಟ ಬಾಲಕಿಯ ಜೀವ ಬದುಕಲಿಕ್ಕೆ ಸಾರ್ವಜನಿಕರು ಸಂಘ ಸಂಸ್ಥೆಯರೂ ಮತ್ತು ವ್ಯಾಪಾರಸ್ಥರು, ಗಣ್ಯರು, ರಾಜಕಾರಣಿಗಳು ಸಹಾಯ ಮಾಡಿದರೆ ಈ ಒಂದು ಬಡಜೀವ ಬದುಕಲಿಕ್ಕೆ ತಾವು ಅನುವು ಮಾಡಿ ಕೊಟ್ಟಂತಾಗುತ್ತದೆ.



ಈಗ ಹೆಚ್ಚಿನ ಚಿಕಿತ್ಸೆ ನೀಡಲು ಆರ್ಥಿಕ ಸಹಾಯದ ಅಗತ್ಯವಿದೆ.

ಹೊಲ ಇಲ್ಲ ಕೂಲಿ ಕೆಲಸ ಮಾಡಿ ಬದುಕುತ್ತಿವೆ ತಾವು ನಮ್ಮ ನಿಮ್ಮ ಕುಮಾರಿ ಸಿಂಚನ ಮಗಳಿಗೆ ನೀವೆ ಅವಳಿಗೆ ದೇವರ ರೂಪದಲ್ಲಿ ಬಂದು ಸಹಾಯ ಮಾಡಿ ಅಂತಾ ಕೈ ಮುಗಿದು ಬೇಡಿಕೊಳ್ಳುತ್ತೇವೆ.

ಆರ್ಥಿಕ ಸಹಾಯಕ್ಕಾಗಿ ಸಾರ್ವಜನಿಕರ ಮೊರೆ ಹೋಗಿದ್ದು, ಜನರ ಸಹಕಾರ ಸಂಸಾರಕ್ಕೆ ಅಗತ್ಯವಿದೆ.

**ಸಿಂಚನ ಮಂಜುನಾಥ ದೊಡ್ಡಮನಿ**

**ಫೋನ್ ಪೇ ನಂಬರ್ 6362497064**

**ಅಕೌಂಟ್ ನಂಬರ್ 40740303027.IFC cod SBIN0040857.**

ಆರ್ಥಿಕ ಸಹಕಾರ ನೀಡಲು ಕೋರಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ Tel: 6362497064 ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸಿ.

**-ವರದಿ : ಮಹಾಂತೇಶ. ಹಾದಿಮನಿ. ವಿಜಯಪುರ**

## ಧೂಳಖೇಡ ಚೆಕ್ ಪೋಸ್ಟ್‌ನಲ್ಲಿ 4.5 ರೂ. ಲಕ್ಷ ನಗದು ವಶ



**ಇಂಡಿ :** ಲೋಕಸಭಾ ಚುನಾವಣಾ ಹಿನ್ನಲೆ ಮಹಾರಾಷ್ಟ್ರ ರಾಜ್ಯದ ಮುಖಾಂತರ ಕರ್ನಾಟಕ ರಾಜ್ಯಕ್ಕೆ ಒಳಗೆ ಬರುವ ಪ್ರತಿಯೊಂದು ವಾಹನಗಳ ಮೇಲೆ ತಪಾಸಣೆ ಮಾಡುತ್ತಿದ್ದಾಗ ಧೂಳಖೇಡ ಚೆಕ್ ಪೋಸ್ಟ್ ನಲ್ಲಿ ದಾಖಲೆ ರಹಿತವಾದ 4 ಲಕ್ಷ 50 ಸಾವಿರ ರೂಪಾಯಿಗಳು ಜಪ್ತಿ ಮಾಡಲಾಗಿದೆ.

ಮಹಾರಾಷ್ಟ್ರರಾಜ್ಯದ ಔರಂಗಾಬಾದ ಜಿಲ್ಲೆಯ ರೋಶನ ಗಜಾನನ ಕರನಾಶೆ ಯಾವುದೆ ಅಧಿಕೃತ ದಾಖಲೆ ಇಲ್ಲದೆ ಎಮ್ ಹೆಚ್ 20 ಎಫ್ ಯು 2039 ಕಾರ್ನಲ್ಲಿ 4 ಲಕ್ಷ 50 ಸಾವಿರ ರೂಪಾಯಿ ನಗದು ಧೂಳಖೇಡ ಮಾರ್ಗದಿಂದ ಬೆಂಗಳೂರ ಕಡೆ ಹೊರಟಿದ್ದರು. ಧೂಳಖೇಡ ಚೆಕ್ ಪೋಸ್ಟ್ ನಲ್ಲಿ ತಪಾಸಣೆ ವೇಳೆ ಈ ಹಣ ಜಪ್ತಿ ಜಿಲ್ಲಾ ಸೀಜರ್ ಕಮೀಟಿಯವರಿಗೆ ಒಪ್ಪಸಲಾಗಿದೆ ಎಂದು ತಿಳಿದು ಬಂದಿದೆ. ಈ ವೇಳೆ ಎಸ್ ಎಸ್ ಟಿ ಟಿಮ್ ನಂ 13 ರ ಅಧಿಕಾರಿಗಳಾದ ಪರಮೇಶ್ವರ ತಳವಾರ, ಎಸ್ ಜೆ ಪೂಜಾರಿ, ಎನ್ ಎಸ್ ಸಾತಲಗಾಂವ, ಪಿಎಸ್ಐ ಹೊನ್ನಪ್ಪ ತಳವಾರ, ಇದ್ದರು. ಈ ಪ್ರಕರಣ ಕುರಿತು ಝಳಕಿ ಪೋಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಜಿಲ್ಲಾ ವರದಿಗಾರರು ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಶಿವಪ್ಪ.ಬಿ.ಹರಿಜನ.ಇಂಡಿ**

## ಮೌನ ಧ್ಯಾನದ ಫಲ ಮಹಾವೃಕ್ಷ: ವಡಗಾಂವಿ

**ರಬಕವಿ-ಬನಹಟ್ಟಿ :** ಮಹಾವೃಕ್ಷ ಈ ದಶಕದ ಅತ್ಯುತ್ತಮ ಕಾದಂಬರಿಗಳಲ್ಲಿ ಒಂದು. ನೂರಾ ಐದು ಸನ್ನಿವೇಶಗಳು ಇಲ್ಲಿವೆ. ಘಟನಾ ಪ್ರಧಾನವಾದ ಈ ಕಾದಂಬರಿಯಲ್ಲಿ ನನ್ನದೆಂಬುದು ಬಿಟ್ಟು ಸಮಾಜ-ಕ್ಕಾಗಿ, ಬಡಮಕ್ಕಳ ಏಳಿಗೆಗೆ ಸದಾ ಶ್ರಮಿಸಿದ ನಾಗನೂರು ಮಠದ ಡಾ. ಶಿವಬಸವ ಸ್ವಾಮಿಗಳವರ ಸಾರ್ಥಕ ಬದುಕು ಇಲ್ಲಿದೆ. ಮೌನ ಧ್ಯಾನದ ಫಲ ಮಹಾವೃಕ್ಷ ಎಂದು ಹಿರಿಯ ಸಾಹಿತಿ ಪ್ರೊ. ಜಿ. ಎಸ್. ವಡಗಾಂವಿ ಹೇಳಿದರು.




ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾ ಘಟಕ ಬಾಗಲಕೋಟೆ, ತಾಲೂಕು ಘಟಕ ರಬಕವಿ-ಬನಹಟ್ಟಿ, ವಲಯಗಳು ತೇರದಾಳ, ಮಹಾಲಿಂಗಪುರ ಇವರ ಸಂಯುಕ್ತಾಶ್ರಯದಲ್ಲಿ ನಾವಲಗಿ ಗ್ರಾಮಪಂಚಾಯತ್ ಸದಸ್ಯ ದಾನಪ್ಪ ಮಲ್ಲಪ್ಪ ಆಸಂಗಿ ಅವರ ತೋಟದ ನಿವಾಸದಲ್ಲಿ ಹಮ್ಮಿಕೊಂಡಿದ್ದ ಪುಸ್ತಕಾವಲೋಕನ -27 ಕಾರ್ಯಕ್ರಮದಲ್ಲಿ ಬನಹಟ್ಟಿಯ ಹಿರಿಯ ಸಾಹಿತಿ ಪ್ರೊ. ಬಿ. ಆರ್. ಪೊಲೀಸ್ ಪಾಟೀಲ ಅವರ ಮಹಾವೃಕ್ಷ ಕಾದಂಬ-ರಿಯನ್ನು ಅವಲೋಕಿಸಿದ ಅವರು ನಾಗನೂರು ಶಿವಬಸವ ಶ್ರೀಗಳ ಸಮಾಜಸೇವೆ, ಕನ್ನಡ ಭಾಷಾಭಿಮಾನ, ಶೈಕ್ಷಣಿಕ ಕೊಡುಗೆ, ಅವರ ಅಂತಃಕರಣ, ಬಡಮಕ್ಕಳ ಬಗೆಗಿನ ಕಾಳಜಿ ಅದ್ಭುತವಾಗಿತ್ತು. ಅವರಿಗೆ ಭಾರತ ರತ್ನ ಪ್ರಶಸ್ತಿ ನೀಡಬೇಕು ಎಂದರು.

ನಾವಲಗಿ ಶ್ರೀಶೈಲಯ್ಯಸ್ವಾಮಿಗಳು ಸಾನಿಧ್ಯ ವಹಿಸಿ ಮಹಾತ್ಮರ ಜೀವನವನ್ನು ಅರಿಯಬೇಕು. ಅಧ್ಯಾತ್ಮಿಕ ಗ್ರಂಥಗಳನ್ನು ಓದಬೇಕು ಎಂದರು.

ಪ್ರೊ. ಎಂ.ಎಸ್. ಬದಾಮಿ, ಜಮಖಂಡಿ ರೈತ ಸಂಘದ ಅಧ್ಯಕ್ಷ ಹನುಮಂತ ಮಗದುಮ್, ಮಹಾಶಾಂತ ಶೆಟ್ಟಿ, ಶಾಂತಕ್ಕ ಮಂಡಿ, ಮಲ್ಲಿಕಾರ್ಜುನ ಜವಳಗಿ, ದುಂಬಾಳೆ, ಡಾ. ರವಿ ಜಮಖಂಡಿ ಸಂವಾದದಲ್ಲಿ ಪಾಲ್ಗೊಂಡರು.

ಕಾವ್ಯ ಕೌಸ್ತುಭ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ಸಿದ್ಧರಾಜ ಪೂಜಾರಿ ಅವರನ್ನು ಹಾದಿ9ಕವಾಗಿ ಸನ್ಮಾನಿಸಲಾಯಿತು.

ನಾವಲಗಿ ಗ್ರಾಮ ಪಂಚಾಯತಿ ಸದಸ್ಯ ದಾನಪ್ಪ ಆಸಂಗಿ ಅಧ್ಯಕ್ಷತೆ ವಹಿಸಿದ್ದರು. ಕಸಾಪ ತಾಲೂಕು ಅಧ್ಯಕ್ಷ ಮ. ಕೃ. ಮೇಗಾಡಿ ಪ್ರಾಸ್ತಾವಿಕವಾಗಿ ಮಾತನಾಡಿ, ಕನ್ನಡಿಗರ ಹೆಮ್ಮೆಯ ಸಂಸ್ಥೆಯಾದ ಕಸಾಪಗೆ ಪ್ರತಿಯೊಬ್ಬ ಕನ್ನಡಿಗ ಸದಸ್ಯನಾಗಬೇಕು. ಕನ್ನಡ ಸೇವೆಗೆ ಮುಂದಾಗಿ, ನಾನು ಕನ್ನಡಿಗ ಎಂಬ ಹೆಮ್ಮೆ ಸದಾ ಜಾಗೃತವಾಗಿರಬೇಕು ಎಂದರು.

ಹಿರಿಯ ಸಾಹಿತಿಗಳಾದ ಜಮಖಂಡಿಯ ಮಲ್ಲಿಕಾರ್ಜುನ ಇಂಡಿ, ಪ್ರೊ. ಮೃತ್ಯುಂ-ಜಯ ರಾಮದುರ್ಗ, ಉದ್ದಿಮೆದಾರರಾದ ಬಸವರಾಜ ದಲಾಲ, ಪ್ರೊ. ಸದಾಶಿವ ದೊಡ್ಡಪ್ಪಗೋಳ, ಈರಣ್ಣ ಗಣಮುಖಿ, ವಿಜಯಕುಮಾರ ಹಲಕುರ್ಕಿ, ರೇವಣೇಶ ಗೌಡರ, ರಾಜಶೇಖರ ಹಿರೇಮಠ, ಕೆ. ಎಸ್. ರಂಗಸ್ವಾಮಿ, ರವೀಂದ್ರ ಅಷ್ಟಗಿ, ಗೌರಿ ಮಿಳ್ಳಿ , ರೇಖಾ ಕಾಂತಿ, ಸುವರ್ಣಾ ಕೊಪ್ಪದ ಇನ್ನಿತರರು ಪಾಲ್ಗೊಂಡಿದ್ದರು.

ಮಲ್ಲಪ್ಪ ಗಣಿ ಪ್ರಾರ್ಥಿಸಿದರು. ಕಾರ್ಯದರ್ಶಿ ಶ್ರೀಶೈಲ ಬುರ್ಲಿ ಸೊಗಸಾಗಿ ನಿರೂಪಿಸಿದರು. ತೇರದಾಳ ವಲಯ ಕಸಾಪ ಅಧ್ಯಕ್ಷ ಗಂಗಾಧರ ಮೋಪಗಾರ ವಂದಿಸಿದರು.

## ನೀರಿನ ಸಮಸ್ಯೆಯಾಗದಂತೆ ಕ್ರಮ ತೆಗೆದುಕೊಳ್ಳಿ: ಶಾಸಕ ಸಿದ್ದು ಸವದಿ

### 338 ಕೊಳವೆ ಬಾವಿ, 13 ತೆರೆದ ಬಾವಿಗಳು । 85 ಖಾಸಗಿ ಕೊಳವೆ ಬಾವಿಗಳನ್ನು ಗುರುತಿಸಲಾಗಿದೆ

**ರಬಕವಿ-ಬನಹಟ್ಟಿ :** ಮುಂದಿನ ಹದಿನೈದು ಇಪ್ಪತ್ತು ದಿನಗಳಲ್ಲಿ ಸಮೀಪದ ಕೃಷ್ಣಾ ನದಿ ಸಂಪೂರ್ಣವಾಗಿ ಬತ್ತಲಿದ್ದು, ನಗರಸಭೆಯ ಅಧಿಕಾ-ರಿಗಳು ಈಗಿನಿಂದಲೇ ನೀರು ಪೂರೈಕೆಯ ಬಗ್ಗೆ ಗಮನ ನೀಡಬೇಕು ಮತ್ತು ನಗರಸಭೆಯ ವ್ಯಾಪ್ತಿಯ ಸಾರ್ವಜನಿಕ-ರಿಗೆ ತೊಂದರೆಯಾಗದಂತೆ ಕ್ರಮ ತೆಗೆದುಕೊಳ್ಳಲು ಸನ್ನದ್ಧರಾಗಬೇಕು ಎಂದು ಶಾಸಕ ಸಿದ್ದೂ ಸವದಿ ತಿಳಿಸಿದರು.

ಶುಕ್ರವಾರ ನಗರಭೆಯ ಸಭಾ ಭವನದಲ್ಲಿ ನೀರಿನ ಸಮಸ್ಯೆ ಕು-ರಿತು ಹಮ್ಮಿಕೊಂಡ ಸಭೆಯಲ್ಲಿ ಅವರು ಮಾತನಾಡಿದರು.

ವಾರ್ಡ್‌ನಲ್ಲಿರುವ ಸಮಸ್ಯೆಗಳ ಕು-ರಿತು ಸದಸ್ಯರಿಂದ ಮಾಹಿತಿಯನ್ನು ಪಡೆದುಕೊಳ್ಳಲಾಗಿದೆ.

ನಗರೋತ್ಥಾನ ಯೋಜನೆ ಅಡಿಯಲ್ಲಿ ನೀರು ಪೂರೈಕೆಗೆ ಸಂಬಂಧಪಟ್ಟಂತೆ ಇರುವ ಟೆಂಡರಗಳನ್ನು ಆದಷ್ಟು ಬೇಗನೆ ಕರೆದು ಕಾಮಗಾರಿಯನ್ನು ಆರಂಭಿಸುವಂತೆ ಮೇಲಾಧಿಕಾ-ರಿಗಳ ಜೊತೆಗೆ ಚರ್ಚೆ ಮಾಡಲಾಗಿದೆ.

ನಗರಸಭೆ ವ್ಯಾಪ್ತಿಯಲ್ಲಿ ನೀರಿನ ಸಮಸ್ಯೆಯನ್ನು ನಿವಾರಣೆ ಮಾಡಲು ರೂ. ಐವತ್ತು ಲಕ್ಷ ಪರಿಹಾರ ಧನವನ್ನು ನೀಡಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಪತ್ರದ ಮೂಲಕ ಕೇಳಲಾಗುವುದು. ನೀರಿನ ತೊಂದರೆ ಇದ್ದಲ್ಲಿ ನಗರಸಭೆಯ ಅಧಿಕಾ-ರಿಗಳು ಗಮನ ನೀಡಬೇಕು. ನಗರಸಭೆಯ ಸದಸ್ಯರು ನೀರಿನ ಸಮಸ್ಯೆಯನ್ನು ಎದುರಿಸುವ ನಿಟ್ಟಿನಲ್ಲಿ ಎಲ್ಲರೂ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಶಾಸಕ ಸಿದ್ದೂ ಸವದಿ ತಿಳಿಸಿದರು.



ಪೌರಾಯುಕ್ತ ಜಗದೀಶ ಈಟಿ ಮಾತನಾಡಿ, ರಬಕವಿ ಬನಹಟ್ಟಿ ನಗರಸಭೆಯ ವ್ಯಾಪ್ತಿಯಲ್ಲಿ ಈಗಾಗಲೇ 338 ಕೊಳವೆ ಬಾವಿಗಳಿವೆ. ಅದರಲ್ಲಿ 326 ಚಾಲ್ತಿಯಲ್ಲಿವೆ. ಉಳಿದ ಕೊಳವೆ ಬಾವಿಗಳ ದುರಸ್ತಿ ಕಾರ್ಯವನ್ನು ಕೂಡಾ ಕೈಗೊಳ್ಳಲಾಗುವುದು. 13 ತೆರೆದ ಬಾವಿಗಳು ಇದ್ದು , ಅವುಗಳನ್ನು ಕೂಡಾ ಸ್ವಚ್ಚಗೊಳಿಸಿ ನೀರು ಪೂರೈಕೆಗೆ ಬಳಸಿಕೊಳ್ಳಲಾಗುವುದು. ಮತ್ತು 85 ಖಾಸಗಿ ಕೊಳವೆ ಬಾವಿಗಳನ್ನು ಗುರುತಿಸಲಾಗಿದೆ. ಕೊಳವೆ ಬಾವಿಗಳ ಮಾಲೀಕರೊಂದಿಗೆ ಒಡಂಬಡಿಕೆ ಮಾಡಿಕೊಂಡು ನೀರು ಪೂರೈಸಿದ ಕೊಳವೆ ಬಾವಿಗಳ ಮಾಲೀಕರ ವಿದ್ಯುತ್ ಬಿಲ್ಲನ್ನು ನಗರಸಭೆಯಿಂದ ಪಾವತಿಸಲಾಗುವುದು.

ನೀರಿನ ಸಮಸ್ಯೆಯನ್ನು ಎದು-ರಿಸುವ ಸಂದರ್ಭದಲ್ಲಿ ಎಲ್ಲರ ಸಹಕಾರ ಅಗತ್ಯವಾಗಿದೆ ಎಂದು ತಿಳಿಸಿದರು.

**ಸದಸ್ಯರ ಗೈರು-ಶಾಸಕರು ಗರಂ: ಅತ್ಯಂತ ಮಹತ್ವದ ಹಾಗು ತುರ್ತು ಸಭೆಯಾಗಿರುವ ನೀರಿನ ಸಮಸ್ಯೆ ಕುರಿತಾದ ಸಭೆಗೆ ಕೇವಲ 10-12 ಸದಸ್ಯರು ಮಾತ್ರ ಹಾಜರಿದ್ದರು. 31 ಸದಸ್ಯರನ್ನೊಳಗೊಂಡ ನಗರಸಭೆಯಲ್ಲಿ ಅರ್ಧದಷ್ಟೂ ಸದಸ್ಯರು ಹಾಜರಾಗದಿರುವದು ತೀವ್ರ ಮುಜುಗರಕ್ಕೆ ಕಾರಣವಾಗಿ, ಶಾಸಕ ಸಿದ್ದೂ ಸವದಿ ಸದಸ್ಯರ ಗೈರು ಹಾಜರಿಗೆ ಗರಮ್ ಆದ ಪ್ರಸಂಗ ನಡೆಯಿತು.**

ಈ ಸಂದರ್ಭದಲ್ಲಿ ಎಂಜಿನಿಯರ್ ರಾಘವೇಂದ್ರ ಕುಲಕರ್ಣಿ, ವೈಶಾಲಿ ಹಿಪ್ಪರಗಿ, ಸುರೇಶ ಬಾಗೇವಾಡಿ, ಸಂಜಯ ತೆಗ್ಗಿ, ಶ್ರೀಶೈಲ ಬೀಳಗಿ, ಯಲ್ಲಪ್ಪ ಕಟಗಿ, ಬಸವರಾಜ ಗುಡೋಡಗಿ, ಶ್ರೀಶೈಲ ಆಲಗೂರ, ಶಿವಾನಂದ ಬುದ್ನಿ, ಅರುಣ ಬುದ್ನಿ, ವಿಜಯ ಕಲಾಲ, ಗೌರಿ ಮಿಳ್ಳಿ , ಮಾರುತಿ ಗಾಡಿವಡ್ಡರ, ಜಯಶ್ರೀ ಬಾಗೇವಾಡಿ, ದುರ್ಗವ್ವ ಹರಿಜನ ಮುಂತಾದ ಬೆರಳೆಣಿಕೆಯಷ್ಟು ಜನ ಸದಸ್ಯರು ಉಪಸ್ಥಿತರಿದ್ದರು.

## 25 ವರ್ಷಗಳಿಂದ ಬಳೆ ಉದ್ಯೋಗ ಮಾಡುತ್ತಿರುವ ಮಹಿಳೆ ಬಳೆ ಮಾರುತ್ತಲೆ ಬದುಕು ಕಟ್ಟಿಕೊಂಡ ರಾಜಶ್ರೀ

**ತೇರದಾಳ :** ಮಹಿಳೆ ಅಬಲೆ ಅಲ್ಲ. ಸಬಲೆ ಎಂಬುದನ್ನು ಬಹಳಷ್ಟು ಮಹಿಳೆಯರು ಬೇರೆ ಕ್ಷೇತ್ರಗಳಲ್ಲಿ ಸಾಧನೆ ಮಾಡುವುದರ ಜತೆಗೆ ನೆಮ್ಮದಿಯ ಜೀವನ ನಡೆಸುತ್ತಿರುವುದನ್ನು ನೋಡುತ್ತಿದ್ದೇವೆ. ಅಂತಹವರ ಸಾಲಿಗೆ ತೇರದಾಳದಲ್ಲಿ ಬಳೆ ವ್ಯಾಪಾರ ಮಾಡುತ್ತಿರುವ ಮಹಿಳೆಯ ಯಶೋಗಾಥೆ ಸಾಧಿಸಬೇಕೆಂಬ ಮಹಿಳೆಯರಿಗೆ ಮಾದರಿಯಾಗಿದೆ.



ಹೌದು. ತೇರದಾಳ ಅಂಚೆ ಕಚೇರಿ ಹತ್ತಿರ ಇರುವ ರಾಜಶ್ರೀ ಜೈಕುಮಾರ ಹಜಾರೆ ಕಳೆದ 25 ವರ್ಷಗಳಿಂದ ಬಳೆ ವ್ಯಾಪಾರ ಮಾಡುತ್ತಿದ್ದು, ಅದರಿಂದಲೇ ತಮ್ಮ ಬದುಕು ಕಟ್ಟಿಕೊಂಡಿದ್ದಾರೆ.

ರಾಜಶ್ರೀ ಅವರ ಪತಿ ಮೊದಲು ಬಟ್ಟೆ ವ್ಯಾಪಾರ ನಡೆಸುತ್ತಿದ್ದರು. ಕಾರಣಾಂತರಗಳಿಂದ ಉದ್ಯೋಗ ನಷ್ಟ ಹೊಂದಿದ್ದರಿಂದ ಜೀವನ ಹೇಗೆ ನಡೆಸುವುದು ಎಂದು ಯೋಚನೆಯಲ್ಲಿ ತೊಡಗಿದ್ದಾಗ ಅವರಿಗೆ ಸಾಥ್ ನೀಡಿ ಮನೆಯಜವಾಬ್ದಾರಿತಗೆದುಕೊಂಡಿದ್ದು ಅವರ ಪತ್ನಿ ರಾಜಶ್ರೀ.

ಪಟ್ಟಣದಲ್ಲಿ ಹೇಗೂ ಬಳೆ ವ್ಯಾಪಾರಸ್ಥರು ಕಡಿಮೆ ಇದ್ದಾರೆ. ಬಂಡಾವಳವೂ ಕಡಿಮೆ ಆಗುತ್ತದೆ. ಆದ್ದ-ರಿಂದ ನಾನೇಕೆ ಬಳೆ ವ್ಯಾಪಾರ ಮಾಡಬಾರದು ಎಂದು ನಿರ್ಧರಿಸಿ ಸಣ್ಣ ಪ್ರಮಾಣದಲ್ಲಿ ಬಳೆ ವ್ಯಾಪಾರ ಪ್ರಾರಂಭಿಸಿದರು. ನಂತರ ದಿನಗಳ ಕಳೆದಂತೆ ವ್ಯಾಪಾರ ವಹಿವಾಟು ಹೆಚ್ಚಾಗ ತೊಡಗಿತು.

ನಾಲ್ಕು ಮಕ್ಕಳಿಗೆ ಶಿಕ್ಷಣ-ರಾಜಶ್ರೀ ಜೈಕುಮಾರ ಹಜಾರೆ ಅವರಿಗೆ ಮೂವರು ಪುತ್ರಿಯರು ಓರ್ವ ಪುತ್ರ ಇದ್ದಾರೆ. ವಿಶೇಷ ಎಂದರೆ ತಮಗೆ ಎಷ್ಟೇ ಕಷ್ಟ ಬಂದರು ನಾಲ್ಕು ಮಕ್ಕಳಿಗೆ ಪದವಿ ಶಿಕ್ಷಣ ಒದಗಿಸಿದ್ದಾರೆ. ಲಕ್ಷ್ಮಿ ಬಿಇ ಸಿವಿಲ್, ಪದ್ಮಶ್ರೀ ಪಲ್ಲವಿ ಬಿಕಾಂ ಹಾಗೂ ಹನುಮಾನ ಬಿಎ ಪದವಿ ಪೂರ್ಣಗೊಳಿಸಿದ್ದಾರೆ. ಅಷ್ಟೇ ಏಕೆ ಪದ್ಮಶ್ರೀ ಹಾಗೂ ಪಲ್ಲವಿ ಅವರ ಮದುವೆಯನ್ನು ಕೂಡ ಮಾಡಿದ್ದಾರೆ.

**ನಾನು ಸುಮಾರು 25 ವರ್ಷಗಳಿಂದ ಬಳೆ ವ್ಯಾಪಾರ ನಡೆಸುತ್ತಿದ್ದೇನೆ. ನನ್ನ ಈ ವ್ಯವಹಾರಕ್ಕೆ ನನ್ನ ಪತಿ ಹಾಗೂ ಮಕ್ಕಳು ಕೂಡ ಸಾಕಷ್ಟು ಸಹಾಯ ಮಾಡುತ್ತಾರೆ. ಬಳೆ ವ್ಯಾಪಾರದಿಂದ ನಮ್ಮ ಜೀವನ ಶೈಲಿಯೇ ಬದಲಾಗಿದೆ. ಮಹಿಳೆಯರು ಯಾವುದಕ್ಕೂ ಕಡಿಮೆ ಇಲ್ಲ. ಮಾಡುವ ಕೆಲಸದಲ್ಲಿ ಶ್ರದ್ಧೆ ಭಕ್ತಿ ಇದ್ದರೆ ಯಶಸ್ಸು ಕಾಣಬಹುದಾಗಿದೆ. ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆಯಿಂದ ನಮಗೆ ಬಹಳಷ್ಟು ಸಹಕಾರಿ ಆಗಿದೆ.**

**-ರಾಜಶ್ರೀ ಜೈಕುಮಾರ ಹಜಾರೆ. ಬಳೆ ವ್ಯಾಪಾರಸ್ಥೆ**

ಬೇರೆ ಬೇರೆ ಕಡೆ ಖರೀದಿ-ಮದುವೆ, ಸೀಮಂತ ಕಾರ್ಯಕ್ರಮಗಳಿಗೆ ಬಳೆ ಉಡಿಸಲು ಹೋಗುವ ರಾಜಶ್ರೀ ಅವ-ರಿಗೆ ಪತಿ ಜೈಕುಮಾರ ಕೂಡ ಸಾಥ್ ನೀಡುತ್ತಾರೆ. ಬಳೆ ಖರೀದಿಯನ್ನು ಗುಜರಾತನ ಅಹಮ್ಮದ ನಗರ, ಮಹಾರಾಷ್ಟ್ರದ ಸೋಲ್ಲಾಪುರ, ಕೋಲ್ಲಾಪುರ, ಸಾತಾರಾ, ಮಿರಜ್, ಹುಬ್ಬಳ್ಳಿ ನಗರಗಳಲ್ಲಿ ವಿವಿಧ ಬಗೆಯ ಬಳೆಗಳನ್ನು ಖರೀದಿಸುತ್ತಾರೆ. ಪ್ರತಿದಿನ ಮನೆಯಲ್ಲಿಯೇ ಮಾರಾಟ ಮಾಡುವ ರಾಜಶ್ರೀ, ಕೆಲವೊಂದು ಸಲ ಬೀದಿಯಲ್ಲಿಯೂ ವ್ಯಾಪಾರ ಮಾಡುತ್ತಾರೆ. ಇವರಲ್ಲಿ ಸಿಗುವ ಡಿಸೈನ್ ಬಳೆಗಳು ಬೇರೆ ಕಡೆಗಳಲ್ಲಿ ಸಿಗುವುದು ಅಪರೂಪ. ಇದರಿಂದ ಬಹುತೇಕ ಮಹಿಳೆಯರು ರಾಜಶ್ರೀ ಅವರ ಲಕ್ಷ್ಮಿ ಬ್ಯಾಂಗಲ್ ಸ್ಟೋರ್ ಹುಡುಕಿಕೊಂಡು ಬರುತ್ತಾರೆ.

ಧರ್ಮಸ್ಥಳ ಸಂಸ್ಥೆ ಸಹಾಯ-ಬಳೆ ವ್ಯಾಪಾರ ವಹಿವಾಟು ಹೆಚ್ಚಾದಂತೆ ಬಂಡವಾಳ ಹೂಡಿಕೆಗೆ ಹಣದ ಕೊರತೆ ಎದುರಾಗ ತೊಡಗಿತು. ಆಗ ರಾಜಶ್ರೀ ಅವರ ನೆರವಿಗೆ ಬಂದಿದ್ದು ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆ. ಈ ವರ್ಷ 1.5 ಲಕ್ಷ ಸಾಲ ತಗೆದುಕೊಂಡಿದ್ದು ಧರ್ಮಸ್ಥಳ ಸಂಸ್ಥೆಯಿಂದ ನಮ್ಮ ವ್ಯಾಪಾರಕ್ಕೆ ಸಾಕಷ್ಟು ಅನುಕೂಲಕರವಾಗಿದೆ. ಜತೆಗೆ ಉದ್ಯೋಗವು ವೃದ್ಧಿಯಾಗಿದೆ ಎಂದು ಅಭಿಮಾನದಿಂದ ರಾಜಶ್ರೀ ಹೇಳಿಕೊಂಡರು.



**ತೇರದಾಳದಲ್ಲಿ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆ ಅಡಿಯಲ್ಲಿ 416 ಮಹಿಳಾ ಸಂಘಗಳಿದ್ದು, 10.89 ಕೋಟಿ ಸಾಲ ನೀಡಲಾಗಿದೆ. ಧರ್ಮಸ್ಥಳ ಸಂಘದಿಂದ ಸಾಲ ತಗೆದುಕೊಂಡ ಸಾಕಷ್ಟು ಮಹಿಳಾ ಸಂಘಗಳು ಸ್ವಯಂ ಉದ್ಯೋಗ ನಡೆಸುತ್ತಿದ್ದಾರೆ. ಮಹಿಳೆಯರ ಸ್ವಾವಲಂಬಿ ಜೀವನಕ್ಕೆ ಧರ್ಮಸ್ಥಳ ಸಂಸ್ಥೆ ಆಸರೆ ಆಗಿದೆ.**

**-ಮಹಾದೇವಿ ಮಠಪತಿ. ತೇರದಾಳ ವಲಯ ಮೇಲ್ವಿಚಾರಕಿ.**

# ದೇಸಿ ತರಬೇತಿ ಸಮಾರೋಪ ಸಮಾರಂಭ

## ತರಬೇತಿಯಲ್ಲಿನ ಅಂಶಗಳನ್ನು ಕಾರ್ಯರೂಪಕ್ಕೆ ತಂದು ರೈತರಿಗೆ ಅನುಕೂಲ ಕಲ್ಪಿಸಿ: ಡಿಸಿ ನಲಿನ್ ಅತುಲ್



**ಕೊಪ್ಪಳ :** ಕೃಷಿ ವಿಸ್ತರಣಾ ಸೇವೆಯಲ್ಲಿ ಡಿಪ್ಲೊಮಾ ಕೋರ್ಸ್ ಪೂರ್ಣಗೊಳಿಸಿದ ಎಲ್ಲ ತರಬೇತಾರ್ಥಿಗಳು ತರಬೇತಿಯಲ್ಲಿ ಕಲಿತ ಅಂಶಗಳನ್ನು ಕಾರ್ಯರೂಪಕ್ಕೆ ತಂದು ನಿಮ್ಮ ಸುತ್ತಲಿನ ರೈತರಿಗೆ ಅನುಕೂಲ ಕಲ್ಪಿಸಿಕೊಡಿ ಎಂದು ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ಹೇಳಿದರು.

ಬುಧವಾರದಂದು ಜಿಲ್ಲಾ ಪಂಚಾಯತಿಯ ಜೆ.ಎಚ್.ಪಟೇಲ್ ಸಭಾಂಗಣದಲ್ಲಿ ಒಂಔಂಊಇ ಹೈದರಾಬಾದ್, ಸಮೇತಿ(ಉತ್ತರ) ಕೃ.ವಿ.ವಿ. ಧಾರವಾಡ, ಕೃಷಿ ಇಲಾಖೆ ಕೊಪ್ಪಳ, ಕೃಷಿ ತಂತ್ರಜ್ಞರ ಸಂಸ್ಥೆ ಕೊಪ್ಪಳ ಹಾಗೂ ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಗಂಗಾವತಿ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಕೃಷಿ ವಿಸ್ತರಣಾ ಸೇವೆಯಲ್ಲಿ ಡಿಪ್ಲೊಮಾ ಕೋರ್ಸ್ (ಆಂಇಖಖ) ಪೂರ್ಣಗೊಳಿಸಿದ ಕೃಷಿ ಪರಿಕರ ಮಾರಾಟಗಾರರ ಟಿ.ಪಿ ಸಂಖ್ಯೆ 1963 ಹಾಗೂ 1964 ಬ್ಯಾಚುಗಳ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಭಾರತದಲ್ಲಿ ಸುಮಾರು 2.82 ಲಕ್ಷ ಕೃಷಿ-ಇನ್‌ಪುಟ್ ಡೀಲರ್‌ಗಳಿದ್ದಾರೆ. ಅವರು ರೈತ ಸಮುದಾಯಕ್ಕೆ ಕೃಷಿ ಮಾಹಿತಿಯ ಪ್ರಧಾನ ಮೂಲವಾಗಿದ್ದಾರೆ. ಹೆಚ್ಚಿನ ರೈತರಿಗೆ ಮೊದಲ ಸಂಪರ್ಕ ಕೇಂದ್ರವೆಂದರೆ ಕೃಷಿ-ಇನ್‌ಪುಟ್ ಡೀಲರ್. ಕೃಷಿ ಕಾರ್ಯಾಚರಣೆಗೆ ಅಗತ್ಯವಿರುವ ವಿವಿಧ ಇನ್‌ಪುಟ್‌ಗಳನ್ನು ಖರೀದಿಸುವಾಗ ರೈತರು ಸ್ವಾಭಾವಿಕವಾಗಿ ಗುಣಮಟ್ಟ ಮತ್ತು ಪ್ರಮಾಣದಲ್ಲಿ ಒಳಹರಿವಿನ ಬಳಕೆಯ ಬಗ್ಗೆ ಇನ್‌ಪುಟ್ ಡೀಲರ್‌ನಿಂದ ಮಾಹಿತಿ ಪಡೆಯಲು ಪ್ರಯತ್ನಿಸುತ್ತಾರೆ. ರೈತರಿಗೆ ನಿಮ್ಮ ಮೇಲೆ ನಂಬಿಕೆ ಇರುತ್ತದೆ. ಆದ್ದರಿಂದ ನೀವು ರೈತರು ಹಾಗೂ ಕೃಷಿ ಭೂಮಿಗೆ ಪೂರಕವಾಗಬಲ್ಲ ಸಲಹೆ, ಮಾಹಿತಿಗಳನ್ನು ರೈತರಿಗೆ ನೀಡಬೇಕು. ಈ ಕುರಿತು ತರಬೇತಿಯಲ್ಲಿ ಸಾಕಷ್ಟು ವಿಷಯಗಳನ್ನು ಕಲಿತಿರುತ್ತೀರಿ. ಅವುಗಳನ್ನು ಪ್ರಾಯೋಗಿಕವಾಗಿ ನಿಮ್ಮ ಅಂಗಡಿಗಳಲ್ಲಿ, ನಿಮ್ಮ ಬಳಿ ಬರುವ ರೈತರಿಗೆ ಸೂಕ್ತ ಮಾಹಿತಿ ನೀಡುವುದರ ಮೂಲಕ ರೈತರಿಗೆ ನೆರವಾಗಿ ಎಂದು ಜಿಲ್ಲಾಧಿಕಾರಿಗಳು ತರಬೇತಾರ್ಥಿಗಳಿಗೆ ತಿಳಿಸಿದರು.

ಇನ್‌ಪುಟ್ ಡೀಲರ್‌ಗಳನ್ನು ಅಗತ್ಯವಾದ ಜ್ಞಾನವನ್ನು ಒದಗಿಸುವುದರ ಮೂಲಕ ಪ್ಯಾರಾ-ವಿಸ್ತರಣಾ ವೃತ್ತಿಪರರಾಗಿ ರೂಪಿಸಬಹುದು. ಅವರು ವಿಸ್ತರಣಾ ಸೇವೆಗಳನ್ನು ವೃತ್ತಿಪರಗೊಳಿಸಬಹುದು ಮತ್ತು ಭಾರತೀಯ ಕೃಷಿಯಲ್ಲಿ ಮಾದರಿ ಬದಲಾವಣೆಯನ್ನು ತರಲು ಕೊಡುಗೆ ನೀಡಬಹುದು. ಈ ಹಿನ್ನೆಲೆಯಲ್ಲಿ ರಾಷ್ಟ್ರೀಯ ಕೃಷಿ ವಿಸ್ತರಣಾ ನಿರ್ವಹಣಾ ಸಂಸ್ಥೆ(ಮ್ಯಾನೇಜ್) ಒಂದು ವರ್ಷದ ಡಿಪ್ಲೊಮಾ ಕೋರ್ಸ್ ಎಂಬ ಶೀರ್ಷಿಕೆಯಡಿ ವಿನ್ಯಾಸಗೊಳಿಸಿದೆ. ಇದು ಸಜ್ಜುಗೊಳಿಸಲು ಸಂಬಂಧಿತ ಮತ್ತು ಸ್ಥಳ-ನಿರ್ದಿಷ್ಟ ಕೃಷಿ ಶಿಕ್ಷಣವನ್ನು ನೀಡುತ್ತದೆ. ಕ್ಷೇತ್ರ ಮಟ್ಟದಲ್ಲಿ ರೈತರು ಎದುರಿಸುತ್ತಿರುವ ದಿನನಿತ್ಯದ ಸಮಸ್ಯೆಗಳನ್ನು ಪರಿಹರಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೆಯ ಅವರು ಮಾತನಾಡಿ, ಕೃಷಿ ಪರಿಕರ ಮಾರಾಟಗಾರರಿಗೆ ನೀಡಿರುವ ತರಬೇತಿಯು ಕ್ಷೇತ್ರಮಟ್ಟದಲ್ಲಿ ರೈತರೊಂದಿಗೆ ವ್ಯವಹರಿಸಲು, ರೈತರಿಗೆ ಸೂಕ್ತ ಮಾಹಿತಿಯನ್ನು ನೀಡಲು ಸಹಾಯಕವಾಗಿದೆ. ರೈತರು ನಿಮ್ಮ ಬಳಿ ಯಾವುದೇ ಕೃಷಿ ಪರಿಕರ ಖರೀದಿಗೆ ಬಂದಾಗ ಅವರೊಂದಿಗೆ ಗೌರವ ಹಾಗೂ ಸೌಜನ್ಯಯುತವಾಗಿ ವರ್ತಿಸಿ. ಅವರು ಬಯಸುವ ಪರಿಕರದ ಕುರಿತು, ಕೃಷಿ ಇಲಾಖೆಯ ವಿವಿಧ ಯೋಜನೆಗಳ ಬಗ್ಗೆ ಸೂಕ್ತ ಮಾಹಿತಿ ನೀಡಿ. ಸರ್ಕಾರ ಹಾಗೂ ರೈತರ ನಡುವೆ ನೀವು ಸೇತುವೆಯಂತೆ ಕಾರ್ಯನಿರ್ವಹಿಸಿ ಸರ್ಕಾರದ ಕೃಷಿ ಯೋಜನೆ, ಸೌಲಭ್ಯಗಳು ರೈತರಿಗೆ ದೊರೆಯುವಂತೆ ಮಾಡಬೇಕು. ಈಗ ಪಡೆದಿರುವ ತರಬೇತಿಯನ್ನು ಸಕಾರಾತ್ಮಕವಾಗಿ ಬಳಸಿಕೊಂಡು, ಗುಣಾತ್ಮಕ ವ್ಯವಹಾರಗಳಿಂದ ರೈತರಿಗೆ ಸಹಾಯ ಮಾಡಿ ಎಂದು ಹೇಳಿದರು.

ಜಂಟಿ ಕೃಷಿ ನಿರ್ದೇಶಕರಾದ ರುದ್ರೇಶಪ್ಪ ಟಿ.ಎಸ್. ಅವರು ಮಾತನಾಡಿ, ಜಿಲ್ಲೆಯಲ್ಲಿ 593 ಇನ್‌ಪುಟ್ ಡೀಲರ್‌ಗಳು ಪರವಾನಿಗೆ ಹೊಂದಿದ್ದು, ಈಗಾಗಲೇ 40 ಅಭ್ಯರ್ಥಿಗಳನ್ನು ಹೊಂದಿರುವ 8ತರಬೇತಿಗಳನ್ನು ಆಯೋಜಿಸಿ 400 ಡೀಲರ್‌ಗಳಿಗೆ ತರಬೇತಿ ನೀಡಲಾಗಿದೆ. ಇಂದು 2 ಬ್ಯಾಚ್‌ಗಳ ತರಬೇತಿ ಪೂರ್ಣಗೊಂಡಿರುವ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸುವ ಮೂಲಕ ಈ ಬ್ಯಾಚ್‌ನ ತರಬೇತಿಯನ್ನು ಸಮಾರೋಪಗೊಳಿಸಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತರಬೇತಾರ್ಥಿಗಳಿಗೆ ಪ್ರಮಾಣ ಪತ್ರವನ್ನು ವಿತರಿಸಲಾಯಿತು. ಧಾರವಾಡ ಕೃಷಿ ವಿಶ್ವ ವಿದ್ಯಾಲಯದ ಪ್ರಾಧ್ಯಾಪಕರು ಹಾಗೂ ರಾಜ್ಯ ನೋಡಲ್ ಅಧಿಕಾರಿಗಳು(ದೇಸಿ) ಹಾಗೂ ಸಂಯೋಜಕರು ಸಮೇತಿ(ಉತ್ತರ) ಆದ ಡಾ.ಎಂ. ಗೋಪಾಲ ಅವರು ತರಬೇತಾರ್ಥಿಗಳಿಗೆ ಕಾರ್ಯನಿರ್ವಹಣೆಯ ಕುರಿತು ಪ್ರತಿಜ್ಞಾವಿಧಿ ಬೋಧಿಸಿದರು. ಈ ಸಂದರ್ಭ ಗಂಗಾವತಿಯ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ.ರಾಘವೇಂದ್ರ ಎಲಿಗಾರ, ಕೊಪ್ಪಳ ಕೃಷಿ ವಿಸ್ತರಣಾ ಕೇಂದ್ರದ ಮುಖ್ಯಸ್ಥರಾದ ಡಾ.ಎಂ.ವಿ. ರವಿ, ಉಪ ಕೃಷಿ ನಿರ್ದೇಶಕರಾದ ಸಹದೇವ ಯರಗೊಪ್ಪ, ಬೆಂಗಳೂರು ಕೃಷಿ ತಂತ್ರಜ್ಞರ ಸಂಸ್ಥೆಯ ಕಾರ್ಯದರ್ಶಿಗಳಾದ ವೀರಣ್ಣ ಕಮತರ, ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕರಷಿ ನಿರ್ದೇಶಕರಾದ ಡಾ.ಚಂದ್ರಕಾಂತ ನಾಡ ಗೌಡ, ದೇಸಿ ಫೆಸಿಲಿಟೇಟರ್ ಜಂಬಣ್ಣ, ಗಂಗಾವತಿ ಸಹಾಯಕ ಕೃಷಿ ನಿರ್ದೇಶಕರಾದ ಸಂತೋಷ ಪಟ್ಟದಕಲ್ ಸೇರಿದಂತೆ ತರಬೇತಾರ್ಥಿಗಳು, ಕೃಷಿ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

## ಜಿಲ್ಲಾ ಕಾರಾಗೃಹದಲ್ಲಿ ಆರೋಗ್ಯ ತಪಾಸಣೆ ಶಿಬಿರ



**ಕೊಪ್ಪಳ :** ಜಿಲ್ಲಾ ಕಾರಾಗೃಹ ಕೊಪ್ಪಳದಲ್ಲಿ ವಿಶ್ವ ಮಾನವ ಹಕ್ಕುಗಳ ಆಯೋಗದ ವತಿಯಿಂದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಕಾರಾಗೃಹ ಹಾಗೂ ಶ್ರೀ ಅಮರೇಶ್ವರ ಕ್ಲಿನಿಕ್ ಕೊಪ್ಪಳ, ಸಹಯೋಗದಲ್ಲಿ ಮಾರ್ಚ್ 10 ರಂದು ಜಿಲ್ಲಾ ಕಾರಾಗೃಹದಲ್ಲಿ ಕಾರಾಗೃಹದಲ್ಲಿನ ಬಂಧಿಗಳಿಗೆ ಆರೋಗ್ಯ ತಪಾಸಣೆ ಶಿಬಿರವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಕಾರಾಗೃಹ ಅಧೀಕ್ಷಕರಾದ ವಿಜಯಕುಮಾರ ಡಿ ಚವ್ಹಾಣ ಹಾಗೂ ಕಾರಾಗೃಹದ ಸಿಬ್ಬಂದಿಗಳು, ಡಿ.ಎಲ್.ಎಸ್.ಎ ವಕೀಲರಾದ ಬೆಳ್ಳಿಯಪ್ಪ, ಮಂಜುನಾಥ ಬಿ, ಮಹಾಲಕ್ಷ್ಮೀ, ವೈದ್ಯರಾದ ಲಿಂಗರಾಜ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಮಕ್ಕಳ ರಕ್ಷಣಾ ಘಟಕದಿಂದ ಬಾಲ್ಯವಿವಾಹ ತಡೆದು, ಬಾಲಕಿಯ ರಕ್ಷಣೆ

**ಕೊಪ್ಪಳ :** ಯಲಬುರ್ಗಾ ತಾಲ್ಲೂಕಿನ ತಲ್ಲೂರು ಗ್ರಾಮದಲ್ಲಿ ಮಾರ್ಚ್ 11 ರಂದು ಆಯೋಜಿಸಿದ್ದ ಸಾಮೂಹಿಕ ಮದುವೆ ಕಾರ್ಯಕ್ರಮದಲ್ಲಿ ನಡೆಯಬೇಕಿದ್ದ ಬಾಲ್ಯ ವಿವಾಹವನ್ನು ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಇತರೆ ಇಲಾಖೆಗಳ ಸಹಕಾರದಲ್ಲಿ ತಡೆದಿದ್ದು, ಬಾಲಕಿಯನ್ನು ಮುಂದಿನ ಪೋಷಣೆ ಹಾಗೂ ರಕ್ಷಣೆಗಾಗಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಗೆ ಹಾಜರು ಪಡಿಸಲಾಗಿದೆ.ಮಾರ್ಚ್ 11 ರಂದು ತಲ್ಲೂರು ಗ್ರಾಮದಲ್ಲಿ ಶ್ರೀ ಶರಣಬಸವೇಶ್ವರ ಜಾತ್ರಾ ಮಹೋತ್ಸವದಅಂಗವಾಗಿಆಯೋಜಿಸಿದ್ದಸಾಮೂಹಿಕ ವಿವಾಹದಲ್ಲಿ ಅಪ್ರಾಪ್ತ ವಯಸ್ಸಿನ ಬಾಲಕಿಯೊಬ್ಬಳಿಗೆ ಬಾಲ್ಯ ವಿವಾಹವನ್ನು ಮಾಡಲಾಗುತ್ತಿದೆ ಎಂದು ಮಕ್ಕಳ ಸಹಾಯವಾಣಿ-1098/112ಗೆ ಮಾಹಿತಿ ಬಂದ ಹಿನ್ನಲೆಯಲ್ಲಿ, ಆ ಗ್ರಾಮ ಪಂಚಾಯತ್ ವ್ಯಾಪ್ತಿಯ ಅಂಗನವಾಡಿ ಮೇಲ್ವಿಚಾರಕಿಯರು, ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಲೆಕ್ಕಾಧಿಕಾರಿಗಳು, ಶಾಲಾ ಮುಖ್ಯೋಪಾಧ್ಯಾಯರು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮತ್ತು ಮಕ್ಕಳ ಸಹಾಯವಾಣಿ-1098/112 ಸಿಬ್ಬಂದಿಗಳು ತುರ್ತಾಗಿ ಸ್ಥಳಕ್ಕೆ ಧಾವಿಸಿ, ಬಾಲಕಿಯ ಮನೆಗೆ ಭೇಟಿ ಮಾಡಿ ವಿಚಾರಿಸಿದ್ದು, ವಿವಾಹವನ್ನು ಮಾಡುತ್ತಿರುವುದು ತಿಳಿದು ಬಂದಿತು. ಬಾಲ್ಯವಿವಾಹ ನಿಷೇಧ ಕಾಯ್ದೆ-2006ರ ಕುರಿತು ಹಾಗೂ ಬಾಲ್ಯವಿವಾಹದ ದುಷ್ಪರಿಣಾಮಗಳ ಬಗ್ಗೆ ತಿಳುವಳಿಕೆಯನ್ನು ನೀಡಿ, ಬಾಲಕಿಗೆ18 ವರ್ಷ (05.01.2008) ಪೂರ್ಣಗೊಳ್ಳದ ಕಾರಣ ಬಾಲಕಿಯನ್ನು ರಕ್ಷಿಸಿ, ಪೋಷಣೆ ಮತ್ತು ರಕ್ಷಣೆಗಾಗಿ, ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಹಾಜರುಪಡಿಸಲು ತೀರ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಬಾಲಕಿಯನ್ನು ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ತುರ್ತಾಗಿ ಹಾಜರುಪಡಿಸಲು ವಾಹನ ಲಭ್ಯವಾಗದಿದ್ದರಿಂದಾಗಿ, ಯಲಬುರ್ಗಾ ತಹಶೀಲ್ದಾರರುತಮ್ಮಸರಕಾರಿವಾಹನವನ್ನುನೀಡುವ ಮೂಲಕ ಬಾಲಕಿಯನ್ನು ಮುಂದಿನ ಪೋಷಣೆ ಮತ್ತು ರಕ್ಷಣೆಹಿತದೃಷ್ಠಿಯಿಂದಜಿಲ್ಲಾಮಕ್ಕಳಕಲ್ಯಾಣಸಮಿತಿಗೆ ಹಾಜರುಪಡಿಸಲು ಸಹಕರಿಸಿದ್ದಾರೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೊಪ್ಪಳ ಜಿಲ್ಲೆಯು ಅಕ್ಷರಶಃ ಆಕರ್ಷಣೀಯ ತಾಣ: ರಾಹುಲ್ ರತ್ನಂ ಪಾಂಡೆಯ

**ಕೊಪ್ಪಳ :** ಹಲವಾರು ಐತಿಹಾಸಿಕ ಮತ್ತು ಪ್ರಸಿದ್ಧ ಧಾರ್ಮಿಕ ತಾಣಗಳನ್ನು ಹೊಂದಿರುವ ಕೊಪ್ಪಳ ಜಿಲ್ಲೆಯು ವಿಶೇಷ ಆಕರ್ಷಣೀಯ ಕೇಂದ್ರವಾಗಿ ಎಲ್ಲರ ಜನಮನ ಸೆಳೆಯುತ್ತದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರಾಹುಲ್ ರತ್ನಂ ಪಾಂಡೆಯ ಅವರು ಹೇಳಿದರು.

ಕೊಪ್ಪಳ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಪ್ರವಾಸೋದ್ಯಮ ಇಲಾಖೆ ಇವರ ಸಹಯೋಗದಲ್ಲಿ ಆನೆಗೊಂದಿಯ ತಳವಾರಘಟ್ಟ ರಸ್ತೆಯ ಶ್ರೀರಂಗದೇವರಾಯಲು ವೇದಿಕೆಯಲ್ಲಿ ಮಾರ್ಚ್ 12ರಂದು ನಡೆದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು. ಕೊಪ್ಪಳ ಜಿಲ್ಲೆಯಲ್ಲಿ ಮಹತ್ವದ್ದು ಏನು ಇಲ್ಲ ಎಂದು ಕೆಲವರು ಹೇಳುತ್ತಾರೆ. ಹಾಗೆ ಹೇಳುವವರು ಒಮ್ಮೆ ಕೊಪ್ಪಳ ಜಿಲ್ಲೆಗೆ ಬಂದು ಸುತ್ತಿದಾಗ ಅವರ ಅಭಿಪ್ರಾಯ ಬದಲಾಗುತ್ತದೆ. ಕೊಪ್ಪಳ ಜಿಲ್ಲೆಯು ಅವರ ನೆಚ್ಚಿನ ತಾಣಗಳಲ್ಲಿ ಒಂದಾಗುವುದರಲ್ಲಿ ಅನುಮಾನವೇ ಇಲ್ಲ. ಹಾಗೆ ಕೊಪ್ಪಳ ಜಿಲ್ಲೆಯು ವಿಶೇಷ ಐತಿಹ್ಯ ಹೊಂದಿದ ಪ್ರದೇಶವಾಗಿದೆ ಎಂದು ತಿಳಿಸಿದರು.

## ಧರ್ಮ ದೇಶ ಮನುಷ್ಯನ ಎರಡು ಕಣ್ಣು: ಶ್ರೀ ರಂಭಾಪುರಿ ಜಗದ್ಗುರುಗಳು



**ಜಗಳೂರು :** ವೈಚಾರಿಕತೆಯ ಬಿರುಗಾಳಿಯಲ್ಲಿ ಭಾರತೀಯ ಸಂಸ್ಕೃತಿ ನಾಶಗೊಳ್ಳಬಾರದು. ಧರ್ಮ ಮತ್ತು ದೇಶ ಮನುಷ್ಯನ ಎರಡು ಕಣ್ಣು ಇದ್ದಂತೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ತಾಲೂಕಿನ ಕೊಡದಗುಡ್ಡ ಶ್ರೀ ವೀರಭದ್ರೇಶ್ವರ ಸ್ವಾಮಿ ಹೆಸರಿನಲ್ಲಿ ನಿರ್ಮಿಸಿದ ಯಾತ್ರಿ ನಿವಾಸ ಉದ್ಘಾಟನೆ ಮತ್ತು ಕಲ್ಯಾಣ ಮಂಟಪದ ಶಿಲಾನ್ಯಾಸ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಭಗವಂತನಿತ್ತ ಸಂಪತ್ತು ನಿಜವಾದ ಸಂಪತ್ತು. ದೇವರು ಎಲ್ಲರಲ್ಲೂ ಇರುವನು. ಆದರೆ ಎಲ್ಲರೂ ದೇವರಲ್ಲಿ ಇಲ್ಲ. ಸಕಲ ಭೋಗ ಮೋಕ್ಷಗಳಿಗೆ ಧರ್ಮವೇ ಮೂಲ. ಸುಖದ ಮೂಲ ಧರ್ಮಾಚರಣೆಯಲ್ಲಿದೆ. ಪರಿಪೂರ್ಣದೆಡೆಗೆ ಕರೆದೊಯ್ಯುವುದೇ ನಿಜವಾದ ಧರ್ಮ. ಬಾಳಿನ ಭಾಗ್ಯೋದಯಕ್ಕೆ ಧರ್ಮದ ಬೆಳಕು ಬೇಕು. ಸಮರ ಜೀವನ ಅಮರ ಜೀವನವಾಗಲು ಸಂಸ್ಕಾರ ಸದ್ವಿಚಾರಗಳ ಅವಶ್ಯಕತೆಯಿದೆ. ಜೀವನ ಮೌಲ್ಯಗಳನ್ನು ಸಂಪಾದಿಸಿಕೊಂಡು ಸನ್ಮಾರ್ಗದಲ್ಲಿ ನಡೆಯುವುದೇ ನಿಜವಾದ ಧರ್ಮ ಎಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿ ಧರ್ಮ ಗ್ರಂಥದಲ್ಲಿ ನಿರೂಪಿಸಿದ್ದಾರೆ. ಮನುಷ್ಯನಿಗೆ ಹೆತ್ತ ತಾಯಿ ಹೊತ್ತ ನೆಲ ಎಷ್ಟು ಮುಖ್ಯವೋ ಅಷ್ಟೇ ಧರ್ಮವೂ ಮುಖ್ಯವೆಂಬುದನ್ನು ಮರೆಯಬಾರದು. ಕೊಡದಗುಡ್ಡ ಶ್ರೀ ವೀರಭದ್ರೇಶ್ವರ ಸ್ವಾಮಿ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳು ನಡೆದಿರುವುದು ತಮಗೆ ಅತೀವ ಸಂತೋಷ ತಂದಿದೆ ಎಂದರು.

ಸಾನ್ನಿಧ್ಯ ವಹಿಸಿದ ಶ್ರೀ ಹಿಮವತ್ಕೇದಾರ ಜಗದ್ಗುರು ರಾವಲ್ ಪದವಿಭೂಷಿತ ಶ್ರೀ ಭೀಮಾಶಂಕರಲಿಂಗ ಶಿವಾಚಾರ್ಯ ಭಗವತ್ಪಾದರು ತಮ್ಮ ಆಶೀರ್ವಚನದಲ್ಲಿ ಧರ್ಮದ ದಿಕ್ಸೂಚಿ ಇಲ್ಲದೇ ಇದ್ದರೆ ಬದುಕಿಗೆ ಅರ್ಥವೇ ಇಲ್ಲ. ಸಮೃದ್ಧ ಸದೃಢ ನಾಡು ಕಟ್ಟುವುದೇ ಧರ್ಮ ಪೀಠಗಳ ಗುರಿಯಾಗಿದೆ. ಶಿವಾಗಮಗಳು ವೀರಶೈವ ಧರ್ಮ ಸಾಹಿತ್ಯದ ಮೂಲ ಬೇರುಗಳು. ಜೀವನದ ಜಂಜಡದಲ್ಲಿ ಸಿಲುಕಿರುವ ಮನುಷ್ಯನಿಗೆ ಪುಣ್ಯ ಕ್ಷೇತ್ರಗಳು ಸ್ಫೂರ್ತಿ ಮತ್ತು ಚೈತನ್ಯವನ್ನು ನೀಡುವ ಕೇಂದ್ರಗಳಾಗಿವೆ ಎಂದರು.

ನೇತೃತ್ವ ವಹಿಸಿದ ಕಣ್ವಕುಪ್ಪೆ ಗವಿಮಠದ ಡಾ|| ನಾಲ್ವಡಿ ಶಾಂತಲಿಂಗ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಸಂವೇದನಾಶೀಲ ಜೀವನಕ್ಕೆ ವೀರಶೈವ ಧರ್ಮ ಕೊಟ್ಟ ಕೊಡುಗೆ ಅಪಾರವಾದುದು. ವ್ಯಕ್ತಿತ್ವ ವಿಕಸನಗೊಳ್ಳಲು ಗುರು ಮತ್ತು ಗುರಿ ಮುಖ್ಯವೆಂದರು. ರಾಮಘಟ್ಟ ಪುರವರ್ಗ ಮಠದ ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು, ಹಾಗೂ ಶಿರಾಳಕೊಪ್ಪದ ಸಿದ್ಧೇಶ್ವರ ದೇವರು ಸಮಾರಂಭದಲ್ಲಿ ಪಾಲ್ಗೊಂಡು ವೀರಶೈವ ಧರ್ಮದ ಧಾರ್ಮಿಕ ಮತ್ತು ಸಾಮಾಜಿಕ ಮೌಲ್ಯಗಳನ್ನು ಉಳಿಸಿ ಬೆಳೆಸಿಕೊಂಡು ಹೋಗುವ ಜವಾಬ್ದಾರಿ ನಮ್ಮೆಲರದು ಆಗಿದೆ ಎಂದರು.

ಶಾಸಕ ಬಿ.ದೇವೇಂದ್ರಪ್ಪ ಸಮಾರಂಭವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಈ ಪವಿತ್ರ ಸಮಾರಂಭದಲ್ಲಿ ದೇವೀಕೆರೆ ಜೆ.ಆರ್. ರವಿಚಂದ್ರ., ಡಿ.ಎಂ.ರುದ್ರಯ್ಯ, ಬಿಳಿಚೋಡು ಶೆಟ್ರು ಕೆ.ವೀರಣ್ಣ, ಕೋರಿ ಪ್ರಭುಲಿಂಗಪ್ಪ, ಸುರೇಶಗೌಡ್ರು, ಜೆ.ಎಸ್.ಶಿವನಗೌಡ್ರು, ಯು.ಜಿ.ಸಿವಕುಮಾರ್, ಮಂಜುನಾಥ, ನಾಗರತ್ನ ಮಲ್ಲೇಶಪ್ಪ ಪಾಲ್ಗೊಂಡು ಉಭಯ ಜಗದ್ಗುರುಗಳಿಂದ ಗೌರವ ಗುರುರಕ್ಷೆ ಸ್ವೀಕರಿಸಿದರು. ಶ್ರೀ ವೀರಭದ್ರಸ್ವಾಮಿ ಟ್ರಸ್ಟ್(ರಿ) ಅಧ್ಯಕ್ಷ ಬಿ.ಎಸ್.ಮಲ್ಲಿಕಾರ್ಜುನ ಮೊದಲ್ಗೊಂಡು ಎಲ್ಲಾ ಪದಾಧಿಕಾರಿಗಳು ಉಪಸ್ಥಿತರಿದ್ದರು. ಡಿ.ಸಿ.ರುದ್ರಸ್ವಾಮಿ ಸ್ವಾಗತಿಸಿದರು. ಮಲ್ಲಿಕಾರ್ಜುನಯ್ಯ ನಿರೂಪಿಸಿದರು. ಇದೇ ಸಂದರ್ಭದಲ್ಲಿ ದೇವಿಕೆರೆ ಗ್ರಾಮದ ಮಹಾದ್ವಾರ ಉದ್ಘಾಟನೆ, ಕರಿಗಲ್ಲು ಸ್ಥಾಪನೆ, ಕಲ್ಯಾಣ ಮಂಟಪದ ಶಂಕುಸ್ಥಾಪನೆ ಉಭಯ ಜಗದ್ಗುರುಗಳಿಂದ ನೆರವೇರಿದವು.

ಅಡ್ಡಪಲ್ಲಕ್ಕಿ :

ಸಮಾರಂಭಕ್ಕೂ ಮುನ್ನ ಬಸವಾಪುರದ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದಿಂದ ಕೊಡದಗುಡ್ಡದ ಶ್ರೀ ವೀರಭದ್ರೇಶ್ವರ ಕಲ್ಯಾಣ ಮಂಟಪದ ವರೆಗೆ ಶ್ರೀ ರಂಭಾಪುರಿ ಜಗದ್ಗುರುಗಳ ಮತ್ತು ಶ್ರೀ ಕೇದಾರ ಜಗದ್ಗುರುಗಳವರ ಅಡ್ಡಪಲ್ಲಕ್ಕಿ ಮಹೋತ್ಸವ ಅತ್ಯಂತ ಸಂಭ್ರಮ ಸಡಗರದಿಂದ ನೆರವೇರಿತು.

ಉತ್ಸವದಲ್ಲಿ ಕುಂಭ ಹೊತ್ತ ಮಹಿಳೆಯರು, ಆರತಿ ಹಿಡಿದ ಸುಮಂಗಲೆಯರು, ಡೊಳ್ಳು, ವೀರಗಾಸೆ ಮತ್ತು ಭಜನಾ ಮಂಡಳದ ಸದಸ್ಯರು ಪಾಲ್ಗೊಂಡು ಮೆರವಣಿಗೆಗೆ ಮೆರಗು ತಂದರು. ಬಂದ ಎಲ್ಲಾ ಭಕ್ತರಿಗೂ ಅನ್ನ ದಾಸೋಹ ನೆರವೇರಿಸಲಾಯಿತು.

## ಆನೆಗೊಂದಿ ಉತ್ಸವದ ವೇದಿಕೆ ಪರಿಕಲ್ಪನೆ ಅದ್ಭುತ

**ಕೊಪ್ಪಳ :** ಐತಿಹಾಸಿಕ ಆನೆಗೊಂದಿ ಉತ್ಸವ-2024ರ ವೇದಿಕೆಯ ಪರಿಕಲ್ಪನೆಯು ಅಭಿನಂದನಾರ್ಹ ಸಂಗತಿಯಾಗಿದೆ. ಮಾನ್ಯ ಶಾಸಕರು ಮುಂದೆ ನಿಂತು ಇತಿಹಾಸ ಹಿನ್ನೆಲೆಯ ವೇದಿಕೆಯನ್ನು ನಿರ್ಮಿಸಲು ಶ್ರಮಿಸಿರುವುದು ಶ್ಲಾಘನೀಯವಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಯಶೋಧಾ ವಂಟಗೋಡಿ ಅವರು ಹೇಳಿದರು.

ಕೊಪ್ಪಳ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಪ್ರವಾಸೋದ್ಯಮ ಇಲಾಖೆ ಇವರ ಸಹಯೋಗದಲ್ಲಿ ಆನೆಗೊಂದಿಯ ತಳವಾರಘಟ್ಟ ರಸ್ತೆಯ ಶ್ರೀರಂಗದೇವರಾಯಲು ವೇದಿಕೆಯಲ್ಲಿ ಮಾರ್ಚ್ 12ರಂದು

ನಡೆದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

ಟೀಮ್ ವರ್ಕ್‌ಗೆ ಉತ್ತಮ ಉದಾಹರಣೆಯು ಆನೆಗೊಂದಿ ಉತ್ಸವವಾಗಿದೆ. ಕಡಿಮೆ ಅವಧಿಯಲ್ಲಿ ಅತ್ಯಂತ ಅಚ್ಚುಕಟ್ಟಾಗಿ ಈ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿದೆ. ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಗಳ ಪರಿಶ್ರಮದಿಂದ ಉತ್ಸವ ಯಶಸ್ವಿ ಸಾಧ್ಯವಾಗಿದೆ ಎಂದು ತಿಳಿಸಿದರು.

## ಉಗಾರ ಖುರ್ದ ಪುರಸಭೆ ವ್ಯಾಪ್ತಿಯ ಸಾರ್ವಜನಿಕರ ಗಮನಕ್ಕೆ

**ಬೆಳಗಾವಿ :** ಉಗಾರ ಖುರ್ದ ಪುರಸಭೆ 2024-25 ರ ಸಾಲಿನ ಆಸ್ತಿಕರ ಪಾವತಿಗೆ ಶೇ. 5 ರಷ್ಟು ರಿಯಾಯಿತಿ ನೀಡಲಾಗಿದ್ದು, ಕರದಾತರು ಅವಧಿ ಮುಗಿಯುದರೊಳಗೆ ಸ್ವಯಂ ಘೋಷಿತ ಆಸ್ತಿ ತೆರಿಗೆ ಪಾವತಿ ಮಾಡುವಂತೆ ಪುರಸಭೆ ಮುಖ್ಯಾಧಿಕಾರಿಗಳು ತಿಳಿಸಿರುತ್ತಾರೆ.

ಕರದಾತರು ತಮ್ಮ ಆಸ್ತಿ ತೆರಿಗೆಯನ್ನು ಏ.30 ಒಳಗಾಗಿ ತುಂಬಿದಲ್ಲಿ ಶೇ. 5 ರಷ್ಟು ರಿಯಾಯಿತಿ ಇರುತ್ತದೆ.

ಮೇ, ಜೂನ್ ತಿಂಗಳಲ್ಲಿ ದಂಡ ರಹಿತವಾಗಿ ಆಸ್ತಿ ತೆರಿಗೆ ತುಂಬಲು ಅವಕಾಶವಿದ್ದು ಒಂದು ವೇಳೆ ವಿಳಂಬವಾದಲ್ಲಿ ಜುಲೈ.1 ರಿಂದ ಪ್ರತಿ ತಿಂಗಳಿಗೆ ಶೇಕಡಾ 2 ರಷ್ಟು ದಂಡ ತುಂಬಿ ತೆರಿಗೆಯನ್ನು ಪಾವತಿಸಬೇಕಾಗುವುದು.

ಆದ್ದರಿಂದ ಎಲ್ಲಾ ಆಸ್ತಿ ಮಾಲೀಕರು ತಮ್ಮ ಆಸ್ತಿಯ ಕುರಿತು ಪುರಸಭೆ ಕಚೇರಿಗೆ ಸಂಪರ್ಕಿಸಿ ಸ್ವಯಂ ಘೋಷಿತ ಪಾರ್ಮ್ ಪಡೆದು ಆಸ್ತಿ ತೆರಿಗೆ ಭರ್ತಿ ಮಾಡಬೇಕು.

ಪುರಸಭೆಯಲ್ಲಿ ಪಾವತಿಸಬೇಕಾದ ಆಸ್ತಿ ತೆರಿಗೆ ನೀರಿನ ಕರ, ಉದ್ಯೋಗ ಪರವಾರಣಿಗೆ ಶುಲ್ಕ, ವಾಣಿಜ್ಯ ಮಳಿಗೆ ಮತ್ತು ಇತರೆ ಎಲ್ಲಾ ಶುಲ್ಕ ತೆರಿಗೆ ಪಾವತಿ

ಸಾರ್ವಜನಿಕರು ಕಡ್ಡಾಯವಾಗಿ ಸ್ವೀಕೃತಿ ತಂತ್ರಾಂಶದ ಮೂಲಕ ಸೃಜಿಸಿದ ಚಲನ ಮುಖಾಂತರ ಪಡೆದು ನೇರವಾಗಿ ನಿಗದಿಪಡಿಸಿದ ಬ್ಯಾಂಕನಲ್ಲಿ ಪಾವತಿಸಬೇಕಾಗಿರುತ್ತದೆ ಎಂದು ಪುರಸಭೆ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ರತ್ನ ಡಾ.ಪುನೀತ ರಾಜ್‌ಕುಮಾರ್ ಹೃದಯ ಜೋತಿ ಯೋಜನೆಯ ಉದ್ಘಾಟನೆ

**ಧಾರವಾಡ :** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಕರ್ನಾಟಕ ರತ್ನ ಡಾ. ಪುನೀತ್ ರಾಜ್ ಕುಮಾರ್ ಹೃದಯ ಜ್ಯೋತಿ ಯೋಜನೆಯ ಉದ್ಘಾಟನಾ ಕಾರ್ಯಕ್ರಮವನ್ನು ಮಾರ್ಚ್ 15, 2024 ರಂದು ಬೆಳಿಗ್ಗೆ 11 ಗಂಟೆಗೆ ಧಾರವಾಡದ ಸತ್ತೂರಿನ ಡಾ.ಡಿ. ವಿರೇಂದ್ರ ಹೆಗ್ಗಡೆ ಕಲಾಕ್ಷೇತ್ರ ಭವನದಲ್ಲಿ ಆಯೋಜಿಸಲಾಗಿದೆ.

ಕೇಂದ್ರ ಸಂಸದೀಯ ವ್ಯವಹಾರಗಳ, ಕಲ್ಲಿದ್ದಲು ಮತ್ತು ಗಣಿ ಸಚಿವ ಪ್ರಲ್ಹಾದ ಜೋಶಿ ಹಾಗೂ ಸಭಾಪತಿ ಬಸವರಾಜ ಹೊರಟ್ಟಿ ಅವರು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ಕಾರ್ಮಿಕ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ ಹಾಗೂ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ ಗುಂಡೂರಾವ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಶಾಸಕರಾದ ಅರವಿಂದ ಚಂದ್ರಕಾಂತ ಬೆಲ್ಲದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು

ಮುಖ್ಯ ಅತಿಥಿಗಳಾಗಿ ಕರ್ನಾಟಕ ವಿಧಾನ ಪರಿಷತ್ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ, ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್, ಶಾಸಕ ಹಾಗೂ ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಬ್ಬಯ್ಯ ಪ್ರಸಾದ, ಶಾಸಕರು ಹಾಗೂ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಯ ಅಧ್ಯಕ್ಷ ವಿನಯ ಕುಲಕರ್ಣಿ, ಶಾಸಕರು ಹಾಗೂ ಕರ್ನಾಟಕ ಕೈಮಗ್ಗ ನಿಗಮದ ಅಧ್ಯಕ್ಷರಾದ ಜೆ.ಎಂ. ಗಣೇಶ, ಶಾಸಕ ಹಾಗೂ ವಾಯವ್ಯ ಸಾರಿಗೆ ನಿಗಮದ ಅಧ್ಯಕ್ಷ ಭರಮಗೌಡ ಅಲಗೌಡ ಕಾಗೆ, ಶಾಸಕರಾದ ಎನ್. ಎಚ್ ಕೋನರಡ್ಡಿ, ಎಸ್.ವ್ಹಿ.ಸಂಕನೂರ, ಪ್ರದೀಪ ಶೆಟ್ಟರ, ಮಹೇಶ ಟೆಂಗಿನಕಾಯಿ, ಎಂ.ಆರ್.ಪಾಟೀಲ್, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಮಹಾಪೌರರಾದ ವೀಣಾ ಚೇತನ ಭರದ್ವಾಡ ಹಾಗೂ ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಶಾಕೀರ ಸನದಿ ಅವರು ಭಾಗವಹಿಸುವರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತ ರಂದೀಪ.ಡಿ., ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಅನಿಲ ಕುಮಾರ .ಟಿ.ಕೆ., ಜಿಲ್ಲಾಧಿಕಾರಿ ದಿವ್ಯ ಪ್ರಭು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ರಾಷ್ಟ್ರೀಯ ಆರೋಗ್ಯ ಅಭಿಯಾನ ನಿರ್ದೇಶಕ ಡಾ. ನವೀನ ಭಟ್.ವೈ., ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ., ಹುಬ್ಬಳ್ಳಿ-ಧಾರವಾಡ ಮಹಾನಗರ ಪೊಲೀಸ್ ಆಯುಕ್ತೆ ರೇಣುಕಾ ಸುಕುಮಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶಕಿ ಡಾ.ಬಿ.ಎಸ್. ಪುಷ್ಪಲತಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗೋಪಾಲ ಎಂ ಬ್ಯಾಕೋಡ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಈಶ್ವರ ಉಳ್ಳಾಗಡ್ಡಿ, ಆರ್.ಸಿ.ಎಚ್. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಯೋಜನಾ ನಿರ್ದೇಶಕ ಡಾ. ಶ್ರೀನಿವಾಸ.ಜಿ ಎನ್., ಎಸ್.ಡಿ.ಎಂ.ವಿಶ್ವವಿದ್ಯಾಲಯದ ಉಪಕುಲಪತಿ

ಡಾ. ನಿರಂಜನ ಕುಮಾರ ಅವರು ಕಾರ್ಯಕ್ರಮದಲ್ಲಿ ವಿಶೇಷ ಆಹ್ವಾನಿತರಾಗಿ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

# ಲಿಂಬೆ ಬೆಳೆಗಳ ರಕ್ಷಣೆಗೆ ಕ್ರಮ: ಶಾಸಕ ಯಶವಂತರಾಯಗೌಡ ಪಾಟೀಲ್

**ವಿಜಯಪುರ :** ಜಿಲ್ಲೆಯಲ್ಲಿ ಬರದ ಛಾಯೆ ಆವರಿಸಿದ್ದು ಇಂಡಿ ಭಾಗದಲ್ಲಿ ಅತೀ ಹೆಚ್ಚು ಲಿಂಬೆ ಬೆಳಗಾರರಿದ್ದಾರೆ. ರೈತರ ಲಿಂಬೆ ಗಿಡಗಳನ್ನು ರಕ್ಷಿಸಲು ನಾವು ಮುಂದಾಗಬೇಕು ಎಂದು ಇಂಡಿ ಶಾಸಕರಾದ ಯಶವಂತರಾಯಗೌಡ ಪಾಟೀಲ್ ಹೇಳಿದರು.

ಗುರುವಾರ ನಗರದ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಲಿಂಬೆ ಅಭಿವೃದ್ಧಿ ಮಂಡಳಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಭಾಗದಲ್ಲಿ ನೀರಿನ ಮಟ್ಟ ಕುಸಿದಿದ್ದು ರೈತರು ನೀರಿನ ಅಭಾವದಿಂದ ಲಿಂಬೆ ಬೆಳೆಗಳನ್ನು ರಕ್ಷಿಸಲು ತುಂಬಾ ತೊಂದರೆ ಅನುಭವಿಸುತ್ತಿದ್ದಾರೆ. ಅಧಿಕಾರಿಗಳು ಈ ಭಾಗದ ರೈತರ ಜಮೀನುಗಳಿಗೆ ಖುದ್ದಾಗಿ ಭೇಟಿ ನೀಡಿ ರೈತರ ನಿಜ ಸ್ಥಿತಿ ಅರಿಯಬೇಕು. ನಿಖರ ಮಾಹಿತಿ ಪಡೆದು ಲಿಂಬೆ ಬೆಳೆ ರಕ್ಷಣೆ ಮುಂದಾಗಬೇಕು ಅಧಿಕಾರಿಗಳು ಪಡೆದ ಮಾಹಿತಿಯನ್ನು ಲಿಂಬೆ ಅಭಿವೃದ್ಧಿ ಮಂಡಳಿ ವತಿಯಿಂದ ಸರ್ಕಾರಕ್ಕೆ ವರದಿಯನ್ನು ಕಳುಹಿಸಿ ತಕ್ಷಣ ಕ್ರಮ ವಹಿಸುವಂತೆ ಜಿಲ್ಲಾಡಳಿತ ಹಾಗೂ ನಾವುಗಳು ಕೂಡಿ 50 ಲಕ್ಷ ರೂಗಳ ಅನುದಾನ ಬಿಡುಗಡೆಗೆ ಕ್ರಮ ವಹಿಸೋಣ ಎಂದರು.

ಏಪ್ರಿಲ್ ಹಾಗೂ ಮೇ ಮಾಹೆಗಳಲ್ಲಿ ಬಿಸಿಲಿನ ತಾಪ ಹೆಚ್ಚಾಗುವುದು ಕಾರಣ ಈಗಿನಿಂದಲೆ ರೈತರ ಸಹಾಯಕ್ಕೆ ಮುಂದಾಗಬೇಕು., ರೈತರು ಬೆಳೆದ ಲಿಂಬೆ ಬೆಳೆಗಳನ್ನು ಹೇಗಾದರು ಮಾಡಿ ಉಳಿಸಿಕೊಳ್ಳೋಣ ಒಮ್ಮೆ ಗಿಡ ಒಣಗಿದರೆ ಮತ್ತೆ ಲಿಂಬೆ ಬೆಳೆಯಬೇಕಾದರೆ ಸುಮಾರು 5ರಿಂದ 6 ವರ್ಷಗಳ ಕಾಲ ಕಾಯಬೇಕು. ಲಿಂಬೆ ಬೆಳೆರೀ ಭಾಗದ ರೈತರ ಜೀವನಾಡಿಯಾಗಿದೆ. ಈ ಭಾಗದ ಲಿಂಬೆಗೆ ವಿಶೇಷ ಗುಣಮಟ್ಟದ ಹೊಂದಿದ್ದು, ಲಿಂಬೆ ಬೆಳೆಗಾರರಿಗೆ ಒಳ್ಳೆಯ ಮಾರುಕಟ್ಟೆ ಸೌಲಭ್ಯ ಉತ್ತಮ ದರವನ್ನು ಒದಗಿಸಲು ಕ್ರಮ ವಹಿಸಬೇಕು. ಇಂಡಿ ಕಚೇರಿಯಲ್ಲಿ ಸಿಬ್ಬಂದಿಗಳ ಕೊರತೆ ಇದ್ದು ಆದಷ್ಟು ಬೇಗ ಬೇರೆ ಬೇರೆ ಇಲಾಖೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ನಿಯೋಜಿಸುವಂತೆ ಸಭೆಯಲ್ಲಿ ತಿಳಿಸಿದರು.



ಕುಡಿಯುವ ನೀರಿನ ಸಭೆ: ಜಿಲ್ಲೆಯಲ್ಲಿ ಅತೀ ನೀರಿನ ತೊಂದರೆ ಅನುಭವಿಸುತ್ತಿರುವ ಗ್ರಾಮಗಳಿಗೆ, ಜನ ಜಾನುವಾರುಗಳಿಗೆ ನೀರಿನ ಸೌಲಭ್ಯ ಒದಗಿಸಲು ಪ್ರಥಮ ಆದ್ಯತೆ ನೀಡಬೇಕು. ಕುಡಿಯುವ ನೀರಿನ ವಿಷಯದಲ್ಲಿ ಜಿಲ್ಲಾಡಳಿತವು ತಮ್ಮದೇ ಆದ ನಿರ್ಣಯಗಳನ್ನು ಪಾಲಿಸಬೇಕು. ತಾರತಮ್ಯ ಆಗದಂತೆ ನೋಡಿಕೊಳ್ಳಬೇಕು. ಕಟ್ಟ ಕಡೆಯ ವ್ಯಕ್ತಿಗೂ ನೀರು ದೊರಕಿಸಿ ಕೊಡುವಂತೆ ಕ್ರಮ ವಹಿಸಬೇಕು. ತಡವಲಗ, ಅಥರ್ಗಾ ಹಾಗೂ ನಿಂಬಾಳ ಕೆರೆಗಳಿಗೆ ನೀರು ಹರಿಸಿದಲ್ಲಿ ಈ ಭಾಗದ ಜನ- ಜಾನುವರುಗಳಿಗೆ ಕುಡಿಯುವ ನೀರಿನ ಅನುಕೂಲವಾಗಲಿದೆ ಎಂದು ಅವರು ಹೇಳಿದರು.

ನಾಗಠಾಣ ಮತಕ್ಷೇತ್ರದ ಶಾಸಕರಾದ ವಿಠ್ಠಲ ಕಟಕದೊಂಡ ಮಾತನಾಡಿ ನಾಗಠಾಣ ಹಾಗೂ ಜಂಬಗಿ ಕೆರೆಗಳಿಗೆ ನೀರು ಹರಿಸಿದರೆ ಈ ಭಾಗದ ಜನ-ಜಾನುವಾರಗಳಿಗೆ ನೀರಿನ ತೊಂದರೆ ನೀಗಿಸಬಹುದಾಗಿದೆ ಅಧಿಕಾರಿಗಳು ಕ್ರಮ ವಹಿಸುವಂತೆ ಕೋರಿದರು.

ಜಿಲ್ಲಾಧಿಕಾರಿ ಟಿ.ಭೂಬಾಲನ್ ಮಾತನಾಡಿ, ಈಗಾಗಲೇ ಕುಡಿಯುವ ನೀರಿನ ಕುರಿತು ಸಾಕಷ್ಟು ಮುಂಜಾಗೃತೆ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಅತೀ ತೊಂದರೆಗೊಳಗಾದ ಗ್ರಾಮಗಳಿಗೆ ಟ್ಯಾಂಕರಗಳ ಮೂಲಕ ನೀರನ್ನು ಸರಬರಾಜು ಮಾಡಲಾಗುತ್ತಿದೆ ಜಿಲ್ಲೆಯಲ್ಲಿ ಜನ-ಜಾನುವಾರುಗಳಿಗೆ ನೀರಿನ ತೊಂದರೆ-ಯಾಗದಂತೆ ಹೆಚ್ಚಿನ ನಿಗಾ ವಹಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಿಷಿ ಆನಂದ, ಪೊಲೀಸ್ ವರಿಷ್ಠಾಧಿಕಾರಿಗಳಾದ ಋಷಿಕೇಶ ಸೋನಾವಣೆ, ಅಪರ ಜಿಲ್ಲಾಧಿಕಾರಿ ಮಹದೇವ ಮುರಗಿ, ಇಂಡಿ ಉಪವಿಭಾಗಾಧಿಕಾರಿಗಳಾದ ಅಬೀದ ಗದ್ಯಾಳ, ಕೃಷಿ ಇಲಾಖೆ, ತೋಟಗಾರಿ-ಕೆ ಇಲಾಖೆ, ಕೃಷ್ಣಾ ಭಾಗ್ಯ ಜಲ ನಿಗಮದ ಅಧಿಕಾರಿಗಳು, ನೀರಾವರಿ ಇಲಾಖೆ ಅಧಿಕಾರಿಗಳು ರೈತರು ಹಾಗೂ ಇತರರು ಉಪಸ್ಥಿತರಿದ್ದರು.

## ಉಚಿತ ಟೈಲರಿಂಗ್ ತರಬೇತಿಗೆ ಆಸಕ್ತ ಮಹಿಳೆಯರಿಂದ ಅರ್ಜಿ ಆಹ್ವಾನ

**ಬೆಳಗಾವಿ :** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಫ್ಯಾಶನ್ ಡಿಸೈನಿಂಗ್(ಟೈಲರಿಂಗ್) 30 ದಿನಗಳ ಉಚಿತ ತರಬೇತಿಯು ಏಪ್ರಿಲ್ 12 ರಿಂದ ಆರಂಭವಾಗಲಿದ್ದು, ಏಪ್ರಿಲ್ 12 ರಂದು ನಡೆಯಲಿರುವ ನೇರ ಸಂದರ್ಶನದಲ್ಲಿ ಗ್ರಾಮೀಣ ಆಸಕ್ತ ನಿರುದ್ಯೋಗಿ ಮಹಿಳೆಯರು ಭಾಗವಹಿಸಬಹುದಾಗಿದೆ. ಗ್ರಾಮೀಣ ಪ್ರದೇಶದ ಗ್ರಾಮೀಣ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು.

ಅಭ್ಯರ್ಥಿಗಳು ಆಧಾರ್ ಕಾರ್ಡ್ ಹಾಗೂ ಬಿಪಿಎಲ್ ಕಾರ್ಡ್ ಹೊಂದಿರಬೇಕು. ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.

ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂ.: 9380162042, 9740982585, 9113880324 ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಳಗಾವಿ ಲೋಕಸಭಾ ಕ್ಷೇತ್ರ ಬಿಜೆಪಿ ಓಬಿಸಿ ಮೋರ್ಚಾ ಸಾಮಾಜಿಕ ಸಮ್ಮೇಳನೆದಲ್ಲಿ ಅನಿಲ ಬೆನಕೆ ಭಾಗಿ

**ಬೆಳಗಾವಿ :** ದಿನಾಂಕ 14-03-2024 ರಂದು ಬಿಜೆಪಿ ಬೆಳಗಾವಿ ಗ್ರಾಮಾಂತರಜಿಲ್ಲೆ ಹಾಗೂ ಮಹಾನಗರಜಿಲ್ಲೆಯ ವತಿಯಿಂದ ಆಯೋಜಿಸಿದ್ದ ಬೆಳಗಾವಿ ಲೋಕಸಭಾ ಬಿಜೆಪಿ ಓಬಿಸಿ ಮೋರ್ಚಾ ಸಾಮಾಜಿಕ ಸಮ್ಮೇಳನ ಕಾರ್ಯಕ್ರಮವನ್ನು ರಾಜ್ಯಾಧ್ಯಕ್ಷರಾದಆರ್. ರಘು ಕೌಟಿಲ್ಯ ಅವರು ಉದ್ಘಾಟಿಸಿ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದರು.

ಈ ಸಂದರ್ಭದಲ್ಲಿರಾಜ್ಯ ಬಿಜೆಪಿ ಉಪಾಧ್ಯಕ್ಷ ಅನಿಲ ಬೆನಕೆ ಮಾತನಾಡಿರಾಜ್ಯದ ಹಾಗೂ ಬೆಳಗಾವಿಯ ಎಲ್ಲ ಲೋಕಸಭಾ ಮತಕ್ಷೇತ್ರಗಳಲ್ಲಿ ಬಿಜೆಪಿ ಹಾಗೂ ಮೈತ್ರಿಕೂಟಜೆಡಿಎಸ್ 28 ಕ್ಷೇತ್ರಗಳಲ್ಲಿ ಜಯಭೇರಿದಾರಿಸಲಿದ್ದು ಅಬ ಕೀ ಬಾರ 400 ಪಾರ, ಫೀರ ಎಕ ಬಾರ ಮೋದಿ ಸರಕಾರಆಗುವುದು ಶತಸಿದ್ದ. ಅದಕ್ಕಾಗಿ ನಾವು ಎಲ್ಲಕಾರ್ಯಕರ್ತರು ಮುಂಬರುವ 2 ತಿಂಗಳುಗಳ ಕಾಲ ದೀನರಾತ್ರಿ ಶ್ರಮೀಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿಆರ್. ರಘುಕೌಟಿಲ್ಯ ಓಬಿಸಿ ರಾಜ್ಯಾಧ್ಯಕ್ಷರು, ಅನಿಲ ಬೆನಕೆ ಬಿಜೆಪಿ ರಾಜ್ಯಉಪಾಧ್ಯಕ್ಷರು, ಗೀತಾ ಸುತಾರ



ಬೆಳಗಾವಿ ಮಹಾನಗರಗ್ರಾಮೀಣಜಿಲ್ಲಾಧ್ಯಕ್ಷರು, ಸವಿತಾ ಕಾಂಬಳೆ ಮಹಾಪೌರ, ಆನಂದ ಚವ್ಹಾಣ ಉಪಮಹಾಪೌರ, ಗಜಾನನಗುಂಜೆರಿ ಓಬಿಸಿ ಮಹಾನಗರಜಿಲ್ಲಾಧ್ಯಕ್ಷರು, ಉಮೇಶ ಪುರಿ ಓಬಿಸಿ ಗ್ರಾಮೀಣಜಿಲ್ಲಾಧ್ಯಕ್ಷರು, ರಾಜಕುಮಾರ ಓಬಿಸಿ ಮಹಾನಗರ ಪ್ರಭಾರಿ, ಜನರಲ ಸೆಕ್ರೇಟರಿ ಮಹಾನಗರ ಗಣೇಶ ದೇಸಾಯಿ ರಾಜಶೇಖರ ಡೋಣಿ ಹಾಗೂ ಈರಯ್ಯಾಖೋತ ಉಪಸ್ಥಿತರಿದ್ದರು.

## ಕೊಪ್ಪಳ ಆರ್‌ಸೆಟಿ ಸಂಸ್ಥೆಯಿಂದ ವಿವಿಧ ತರಬೇತಿಗಳಿಗೆ ಅರ್ಜಿ ಆಹ್ವಾನ

**ಕೊಪ್ಪಳ :** ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ ಕೊಪ್ಪಳ ವತಿಯಿಂದ ಜಿಲ್ಲೆಯ ಗ್ರಾಮೀಣ ಭಾಗದ ಆಸಕ್ತರಿಗೆ ವಿದ್ಯುತ್ ಮೋಟಾರ್ ದುರಸ್ತಿ ಮತ್ತು ಸರ್ವಿಸ್, ಮೊಬೈಲ್ ರಿಪೇರಿ ಮತ್ತು ದುರಸ್ತಿ, ಕಂಪ್ಯೂಟರ್ ಡೆಸ್ಕ್‌ಟಾಪ್ ಪಬ್ಲಿಷಿಂಗ್ ಮತ್ತು ಕುರಿ ಸಾಕಾಣಿಕೆ ಕುರಿತು ಉಚಿತ ತರಬೇಯನ್ನು ನೀಡಲಾಗುತ್ತಿದ್ದು, ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ. 30 ದಿನಗಳ ವಿದ್ಯುತ್ ಮೋಟಾರ್ ದುರಸ್ತಿ ಮತ್ತು ಸರ್ವಿಸ್ ತರಬೇತಿ, 30 ದಿನಗಳ ಮೊಬೈಲ್ ರಿಪೇರಿ ಮತ್ತು ದುರಸ್ತಿ, 45 ದಿನಗಳ ಕಂಪ್ಯೂಟರ್ ಡೆಸ್ಕ್‌ಟಾಪ್ ಪಬ್ಲಿಷಿಂಗ್ ತರಬೇತಿ, 10 ದಿನಗಳ ಕುರಿ ಸಾಕಾಣಿ-ಕೆ ತರಬೇತಿಗಳನ್ನು ಊಟ ಮತ್ತು ವಸತಿಯೊಂದಿಗೆ ಉಚಿತವಾಗಿ ನೀಡಲಾಗುವುದು.ಕನಿಷ್ಠ ಎಂಟನೇ ತರಗತಿ ಉತ್ತೀರ್ಣರಾದ 18 ರಿಂದ 45 ವರ್ಷದೊಳಗಿನ ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿದಾರರು ಜಿಲ್ಲೆಯ ಗ್ರಾಮೀಣ ಭಾಗದವರಾಗಿರಬೇಕು. ಸ್ವಯಂ ಉದ್ಯೋಗದಲ್ಲಿ ಆಸಕ್ತಿ ಹೊಂದಿರಬೇಕು. ಮಾರ್ಚ್ 20 ರಂದು ಸಂದರ್ಶನ ನಡೆಯಲಿದ್ದು, ಆಯ್ಕೆಯಾದ ಅಭ್ಯರ್ಥಿಗಳಿಗೆ ಮಾ.25 ರಿಂದ ತರಬೇತಿ ಆರಂಭಿಸಲಾಗುವುದು.

ಆಸಕ್ತರು ಆಧಾರ್ ಕಾರ್ಡ, ರೇಷನ್ ಕಾರ್ಡ್, ಮಾರ್ಕ್ಸ್ ಕಾರ್ಡ್‌ಗಳ ಜೆರಾಕ್ಸ್ ಪ್ರತಿಗಳು ಹಾಗೂ 03 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳೊಂದಿಗೆ ನಿರ್ದೇಶಕರು, ಸ್ಟೇಟ್ ಬ್ಯಾಂಕ್ ಆಫ್ ಇಂಡಿ-ಯಾ, ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ, ಜಿಲ್ಲಾ ಕೈಗಾರಿಕಾ ಕೇಂದ್ರ ಆವರಣ, ಅಶೋಕ ಸರ್ಕಲ್ ಹತ್ತಿರ, ಕೊಪ್ಪಳ ವಿಳಾಸಕ್ಕೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08539-231038, 9483618178, 9481085217, 7259073827, 6364173983 ಗೆ ಸಂಪರ್ಕಿಸಬಹುದು ಎಂದು ಎಸ್‌ಬಿಐ ಆರ್‌ಸೆಟಿ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹರ್ಷದ ಕುಳ್ಳ ನೋಡಿ ವರ್ಷದ ಕುಳ್ಳ ಕಳ್ಕೊಬೇಡಿ: ಮೋದಿಯನ್ನು ಬೆಂಬಲಿಸುವಂತೆ ರಾಜ್ಯ ಓ.ಬಿ.ಸಿ ಮೋರ್ಚಾ ಅಧ್ಯಕ್ಷ ರಘು ಕೌಟಿಲ್ಯ ಕರೆ

**ಬೆಳಗಾವಿ :** ಹರ್ಷದ ಕುಳ್ಳ ನೋಡಿ ವರ್ಷದ ಕುಳ್ಳ ಕಳ್ಕೊಬೇಡಿ ಮೋದಿಯನ್ನು ಬೆಂಬಲಿಸುವಂತೆರಾಜ್ಯ.ಓ.ಬಿ.ಸಿ ಮೋರ್ಚಾ ಅಧ್ಯಕ್ಷರಾದ ರಘು ಕೌಟಿಲ್ಯ ಕರೆ ನೀಡಿದರು ಭಾರತೀಯ ಜನತಾ ಪಾರ್ಟಿ ಬೆಳಗಾವಿ ವತಿಯಿಂದ ಬೆಳಗಾವಿಯ ಸರ್ಕಿಟ್ ಹೌಸ್ ದಲ್ಲಿ ಮಾಧ್ಯಮ ಗೋಷ್ಠಿ ಏರ್ಪಡಿಸಲಾದ ಮಾಧ್ಯಮ ಗೋಷ್ಠಿಯಲ್ಲಿ ರಾಜ್ಯ ಓ.ಬಿ.ಸಿ ಮೋರ್ಚಾ ಅಧ್ಯಕ್ಷರಾದ ರಘು ಕೌಟಿಲ್ಯ ಮಾತನಾಡುತ್ತಾ ಅಂಬಿಗರ ಚೌಡಯ್ಯ ನಿಗಮದ ಕೋಳಿ ಸಮಾಜ ,ಗಂಗಾಮತಸ್ಥ ಸಮಾಜ ಅವರಿಗೆ 25 ಕೋಟಿ ಹಣ ನಮ್ಮ ಸರ್ಕಾರ ಕೊಟ್ಟಿದೆ ಕಾಂಗ್ರೆಸ ಸರ್ಕಾರ ಕೇವಲ 9 ಕೋಟಿ ಕೊಟ್ಟಿದೆ,ಉಪ್ಪಾರ ಅಭಿವೃದ್ಧಿ ನಿಗಮಕ್ಕೆ ಬಿಜೆಪಿ ಸರ್ಕಾರ ಇದ್ದಾಗ 15 ಕೊಟ್ಟಿದ್ರೆ ಈ ಸರ್ಕಾರ ಕೇವಲ 8 ಕೋಟಿ ಮಾತ್ರ ಕೊಟ್ಟಿದೆ ಕಾಂಗ್ರೆಸ ಸರ್ಕಾರದ ಯಾವ ಯೋಜನೆ ಜನರಿಗೆ



ಕೊಟ್ಟಿರುವ ಗ್ಯಾರಂಟಿ ಯೋಜನೆಗಳನ್ನು ಸರಿಯಾಗಿ ನಿರ್ವಹಿಸುತ್ತಿಲ್ಲ ಕುಲ ಕಸುಬು ಮಾಡುತ್ತಿರುವ ಕುಟುಂಬಗಳ ಕಲ್ಯಾಣಕ್ಕೆ ಮಾಡಿರುವ ನಿಗಮಗಳ ಬಾಗಿಲು ಮುಚ್ಚಿಸುವ ಕೆಲಸವನ್ನು ಸಿದ್ದರಾಮಯ್ಯ ಸರಕಾರ ಮಾಡುತ್ತಿದೆ ಎಂದು ಆರೋಪಿಸಿದರು .

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ ಸರ್ಕಾರಕ್ಕೆಬುದ್ಧಿಕಲಿಸುವಕೆಲಸವನ್ನುಜನಾ ಮಾಡಬೇಕು ಸಣ್ಣ ಸಣ್ಣ ಸಮುದಾಯಗಳು ಮೋದಿಯವರ ಪರವಾಗಿ ಮೋದಿಯವರು ವಿಶೇಷ ಒತ್ತನ್ನು ನೀಡ ವಿಶ್ವಕರ್ಮ ಯೋಜನೆಯನ್ನು ತಂದಿದ್ದಾ ಖಜಾನೆಯನ್ನು ಬರಡು ಮಾಡಿರುವ ಕಾಂಗವರ ಬದುಕಿಗೆ ಯಾವುದೇ ರೀತಿ ಸಹಾಯಕಾರಿಯೋಜನೆ ನೀಡುತ್ತಿಲ್ಲ ಮೇದಾರ ಸಮುದಾಯ,ಉಪ್ಪಾರ ಸಮುದಾಯ ಸವಿತಾ ಸಮುದಾಯ ವಿಶ್ವಕಮ ಸಮುದಾಯದ ನಿಗಮಗಳನ್ನು ನಿಷ್ಕ್ರಿಯ ಗೊಳಿಸುವ ಕೆಲಸ ಕಾಂಗ್ರೆಸ ಸರ್ಕಾರ ಮಾಡುತ್ತಿದೆ ಇದನ್ನು ಜನತೆ ಜಾಗೃತಿ ಮೂಡಿಸಬೇಕು ರೈತಾಪಿ ಜನರಿಗೆ ಕೊಳ್ಳಿ ಇಟ್ಟ ಕಾಂಗ್ರೆಸ ಸರ್ಕಾರಕ್ಕೆ ಬುದ್ದಿ ಕಲಿಸಬೇಕು.

ಎಲ್ಲರು ಮೋದಿಯವರ ಗೆಲುವಿಗೆ ಶ್ರಮಿಸೋಣಾ ಎಂದರು.

ಮಾಧ್ಯಮ ಗೋಷ್ಠಿಯಲ್ಲಿ ಬಿಜೆಪಿ ಬೆಳಗಾವಿ ಗ್ರಾಮಾಂತರ ಜಿಲ್ಲಾಧ್ಯಕ್ಷ ಸುಭಾಷ್ ಪಾಟೀಲ್, ಬೆಳಗಾವಿ ಮಹಾನಗರ ಜಿಲ್ಲಾ ಅಧ್ಯಕ್ಷರಾದ ಗೀತಾ ಸುತಾರ, ಭಾಗವಹಿಸಿದ್ದರು ವರದಿಗಾರ ನಂದೀಶ ಮೆಣಸಿನಕಾಯಿ ಬೆಳಗಾವಿ ಜಿಲ್ಲೆ

## ಪಿ.ಪಿ.ವಾವಾ ಅಧ್ಯಕ್ಷತೆಯಲ್ಲಿ ಸಫಾಯಿ ಕರ್ಮಚಾರಿ ಸಭೆ ಸಫಾಯಿ ಕರ್ಮಚಾರಿಗಳಿಗೆ ಸೌಲಭ್ಯ ತಲುಪಿಸಿ: ವಾವಾ

**ಬಾಗಲಕೋಟೆ :** ಸಫಾಯಿ ಕರ್ಮಚಾರಿಗಳಿಗೆ ಸರಕಾರ ನೀಡುವ ಪ್ರತಿಯೊಂದು ಸೌಲಭ್ಯಗಳನ್ನು ತಲುಪಿಸುವ ಕಾರ್ಯವಾಗಬೇಕೆಂದು ರಾಷ್ಟ್ರೀಯ ಸಫಾಯಿ ಕರ್ಮಚಾರಿ ಆಯೋಗದ ಸದಸ್ಯರಾದ ಡಾ.ಪಿ.ಪಿ.ವಾವಾ ಅಧಿಕಾರಿಗಳಿಗೆ ತಿಳಿಸಿದರು.



ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಸಮಾಜ ಕಲ್ಯಾಣ ಇಲಾಖೆ ಹಾಗೂ ನಗರಾಭಿವೃದ್ದಿ ಕೋಶದ ಸಹಯೋಗದಲ್ಲಿ ಹಮ್ಮಿಕೊಂಡ ಸಫಾಯಿ ಕರ್ಮಚಾರಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಸಫಾಯಿ ಕರ್ಮಚಾರಿಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವದರ ಜೊತೆಗೆ ಅವರಿಗೆ ಪ್ರತಿ ತಿಂಗಳು ಆರೋಗ್ಯ ತಪಾಸಣೆಗೆ ಒಳಗಪಡಿಸಬೇಕು. ಜಿಲ್ಲೆಯಲ್ಲಿರುವ ಇಎಸ್‌ಐ ಹಾಸ್ಪಿಟಲ್‌ಗಳ ಪಟ್ಟಿ ಮಾಡಿ ಸಫಾಯಿ ಕರ್ಮಚಾರಿಗಳಿಗೆ ಸ್ಥಳೀಯ ಸಂಸ್ಥೆಗಳು ನೀಡಲು ಸೂಚಿಸಿದರು.

ಸಫಾಯಿ ಕರ್ಮಚಾರಿ ಮಕ್ಕಳಿಗೆ ಉನ್ನತ ಶಿಕ್ಷಣಕ್ಕೆ ಸಹಾಯಧನ, ಸ್ವಯಂ ಉದ್ಯೋಗಕ್ಕೆ ಸಹಾಯಧನ, ಎಬಿಆರ್‌ಕೆ ಆರೋಗ್ಯ ಕಾರ್ಡ, ಇಎಸ್‌ಐ ಆಸ್ಪತ್ರೆಗಳಲ್ಲಿ ಉಚಿತವಾಗಿ ಗುಣಮಟ್ಟದ ಚಿಕಿತ್ಸೆ ನೀಡುತ್ತಿರುವ ಬಗ್ಗೆ ಹಾಗೂ ವಿದ್ಯಾರ್ಥಿವೇತನದ ಬಗ್ಗೆ ಮಾಹಿತಿ ಪಡೆದುಕೊಂಡರು. ಗೃಹಭಾಗ್ಯ ಯೋಜನೆಯಡಿ ಸಫಾಯಿ ಕರ್ಮಚಾರಿಗಳಿಗೆ ವಸತಿ ಕಲ್ಪಿಸಿರುವ ಬಗ್ಗೆ ಮಾಹಿತಿ ಕೇಳಿದಾಗ ಇದಕ್ಕೆ ಪ್ರತಿಕ್ರಿಯಡಿಸಿದ ನಗರಾಭಿವೃದ್ದಿ ಕೋಶದ ಯೋಜನಾ ನಿರ್ದೇಶಕ ಪುನಿತ್ ಅವರು ಜಿಲ್ಲೆಯಲ್ಲಿ ನಿವೇಶನ ಇಲ್ಲದೇ ಇರುವ ಹಾಗೂ ನಿವೇಶ ಇದ್ದು ಮನೆ ಕಟ್ಟಿಕೊಳ್ಳದೇ ಇರುವ ಸಫಾಯಿ ಕರ್ಮಚಾರಿಗಳ ಮಾಹಿತಿಯನ್ನು ಸ್ಥಳೀಯ ಸಂಸ್ಥೆಗಳ ವಾರು ಪಟ್ಟಿ ಮಾಡಿ ಸೂರು ಒದಗಿಸುವಂತೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿರುವುದಾಗಿ ತಿಳಿಸಿದರು.

ಜಿಲ್ಲೆಯಲ್ಲಿ ಒಟ್ಟು 17 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಖಾಯಂ ಪೌರ ಕಾರ್ಮಿಕರು ಎಷ್ಟು ಗುತ್ತಿಗೆ, ಹೊಗುತ್ತಿಗೆ ಆಧಾರ ಮೇಲೆ ಕೆಲಸ ಮಾಡುವವರ ಮಾಹಿತಿ ಪಡೆದುಕೊಂಡು. ಅವ-ರಿಗೆ ಪಿಎಫ್, ಇಎಸ್‌ಐ ಕಡಿತ ಮಾಡಿದ ಬಗ್ಗೆ ವಿಚಾರಿಸಿದರು. ಅಲ್ಲದೇ ಅವರ ಹೆಸರಿನಲ್ಲಿ ವಿಮೆ ಪಾಲಸಿ ಬಗ್ಗೆಯೂ ಮಾಹಿತಿ ಪಡೆದುಕೊಂಡರು. ಹೆಚ್ಚಿನ ಚಿಕಿತ್ಸೆಗೆ ಖರ್ಚು ಮಾಡಿದ ಹಣ ಪಾವತಿಯಾಗುತ್ತಿಲ್ಲ. ಪೌರಕಾರ್ಮಿಕರಿಗೆ ಪ್ರತಿ ತಿಂಗಳು ಸಂಭಳ ಆಗದಿರುವ ಬಗ್ಗೆ ಕಾರ್ಮಿಕರು ಸಭೆಗೆ ತಿಳಿಸಿದಾಗ ಈ ಬಗ್ಗೆ ಕ್ರಮವಹಿಸುವುದಾಗಿ ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಪರಶುರಾಮ ಶಿನ್ನಾಳಕರ, ನಗರಾಭಿವೃದ್ದಿ ಕೋಶದ ಯೋಜನಾ ನಿರ್ದೇಶಕ ಪುನಿತ್, ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಶಶಿಕಾಂತ ಶಿವಪುರಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ನಂದಾ ಹಣಮರಟ್ಟಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಬಿ.ಕೆ.ನಂದನೂರ ಸೇರಿದಂತೆ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು, ಮುಖ್ಯಾಧಿಕಾರಿಗಳು ಉಪಸ್ಥಿತರಿದ್ದರು.

## ಜಿತೊ ಲೇಡಿಜ ವಿಂಗ ವತಿಯಿಂದ ಮಾ.31 ರಂದು ಅಹಿಂಸಾ ರನ್ ಮ್ಯಾರಾಥಾನ




**ಬೆಳಗಾವಿ :** ಜೈನ ಇಂಟರ್ ನ್ಯಾಷನಲ್ ಟ್ರೆಡ ಆರ್ಗನೈಝೇಶನ ಜಿತೋ ಲೇಡಿಜ ವಿಂಗ ವತಿಯಿಂದ ಇದೇ ಮಾರ್ಚ 31 ರಂದು ಬೆಳಗಾವಿಯಲ್ಲಿ ಅಹಿಂಸಾ ರನ್ ಮ್ಯಾರಾಥಾನ ಓಟವನ್ನು ಆಯೋಜಿಸಲಾಗಿದೆ ಎಂದು ಜಿತೋ ಲೇಡಿಜ ವಿಂಗ ಅಧ್ಯಕ್ಷೆ ಮಾಯಾ ಜೈನ ಅವರು ಇಂದಿಲ್ಲಿ ಹೇಳಿದರು.

ಬೆಳಗಾವಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿತೋ ಸಂಸ್ಥೆಯು ಇದೊಂದು ಅಂತರ್‌ರಾಷ್ಟ್ರೀಯ ಮಟ್ಟದ ಸಂಸ್ಥೆಯಾಗಿದ್ದು ವಿಶ್ವದ 28 ದೇಶಗಳಲ್ಲಿ ಹಾಗೂ ಭಾರತದಲ್ಲಿ 69 ವಿಭಾಗಗಳನ್ನು ಹೊಂದಿದ್ದು, ಈ ಎಲ್ಲ ವಿಭಾಗಗಳಲ್ಲಿ ಈ ಅಹಿಂಸಾ ರನ್ನ ನಡೆಸಲಾಗುವುದೆಂದು ಅವರು ಹೇಳಿದರು.

ಕಳೆದ 2023 ರಲ್ಲಿ ಆಯೋಜಿಸಲಾಗಿದ್ದ ಅಹಿಂಸಾ ರನ್ನ ಓಟದಲ್ಲಿ ಒಟ್ಟು 1.16 ಸಾವಿರ ಜನರು ಭಾಗವಹಿಸಿ ಈ ಓಟವನ್ನು ಯಶಸ್ವಿಗೊಳಿಸಿದ್ದರು. ಈ ವರ್ಷವೂ ಸಹ ಜನರು ಸಹಭಾಗಿತ್ವ ಹೆಚ್ಚಾಗುವ ನಿರೀಕ್ಷೆ ಹೊಂದಲಾಗಿದೆ. ಈ ಮ್ಯಾರಾಥಾನ ಓಟದ ನಿಮಿತ್ಯ ವಿಶ್ವದಲ್ಲೆಡೆ ಅಹಿಂಸೆಯನ್ನು ಪ್ರತಿಪಾದಿಸುವ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ಮ್ಯಾರಾಥಾನ ಓಟದ ಸಂಚಾಲಕಿ ಕೀರ್ತಿ ದೊಡ್ಡಣ್ಣವರ ಅವರು ಮಾತನಾಡಿ, ಮಾರ್ಚ 3 ರಂದು ಬೆಳಿಗ್ಗೆ 5:30 ಗಂಟೆ-ಗೆ ಬೆಳಗಾವಿಯ ಕ್ಯಾಂಪ ಮರಾಠಿ ವಿದ್ಯಾನಿಕೇತನ ಶಾಲಾ ಮೈದಾನದಿಂದ ಈ ಓಟ ಆರಂಭವಾಗಲಿದೆ. ಈ ಓಟದಲ್ಲಿ 3 ಕಿಮಿ, 5 ಕಿಮೀ, ಹಾಗೂ 10 ಕಿಮೀ ಅಂತರದ ಅಹಿಂಸಾ ರನ್ ಮ್ಯಾರಾಥಾನ ಓಟ ನಡೆಯಲಿದೆ. ಈ ಓಟದಲ್ಲಿಬ ಭಾಗವಹಿಸುವ ಪ್ರತಿಯೊಬ್ಬರಿಗೂ ಟಿ ಶರ್ಟ, ಪದಕ, ಪ್ರಮಾಣ ಪತ್ರ, ಹಾಗೂ ಉಪಹಾರದ ವ್ಯವಸ್ಥೆ ಮಾಡಲಾಗಿದೆ ಎಂದು ಅವರು ತಿಳಿಸಿದರು.

ಈ ಓಟದಲ್ಲಿ ಭಾಗವಹಿಸುವವರು ತಮ್ಮ ಹೆಸರುಗಳನ್ನು ನೊಂದಾಯಿಸುವುದು ಕಡ್ಡಾಯವಾಗಿದೆ. ಈ ಮ್ಯಾರಾಥಾನ ಓಟದಿಂದ ಬಂದಂತಹ ಹಣದಲ್ಲಿ ಬೆಳಗಾವಿಯ ಸದಾಶಿವ ನಗರದಲ್ಲಿನ ಸರಕಾರಿ ಕನ್ನಡ ಶಾಲೆ ನಂ26 ಈ ಶಾಲೆಯ ಕಟ್ಟಡ ನಿರ್ಮಾಣಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಲು ಬಳಿಸಿಕೊಳ್ಳಲಾಗುವುದೆಂದು ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿತೋ ಲೇಡಿಜ ವಿಂಗ ಕಾರ್ಯದರ್ಶಿ ಮಮತಾ ಜೈನ, ಜಿತೋ ಅಧ್ಯಕ್ಷ ವೀರಧವಲ ಉಪಾಧ್ಯೆ, ಜಿತೋ ಯುವ ಘಟಕದ ಅಧ್ಯಕ್ಷ ದೀಪಕ ಸುಬೇದಾರ, ಲೇಡಿಜ ವಿಂಗ ಸಮನ್ವಯಕ ಅಭಯ ಆದಿಮನಿ ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು.

## ಇಮಾಮ ಮುನೀರ ಅಹ್ಮದ ಕೊರಬು ಅವರಿಗೆ ಪಿಎಚ್‌ಡಿ ಪದವಿ

**ಬೆಳಗಾವಿ :** ಬೆಳಗಾವಿಯ ರಾಣಿ ಚನ್ನಮ್ಮ ವಿಶ್ವವಿದ್ಯಾಲಯಕ್ಕೆ "ಡಯಾಸ್ಪೋರಾ, ಟ್ರಾನ್ಸ್‌ನ್ಯಾಷನ್ಯಾಲಿಟಿ ಆ್ಯಂಡ್ ಮಲ್ಟಿಕಲ್ಚಿರಲಿಜಮ್ ಇನ್ ಸೆಲೆಕ್ಟ್ ನಾವೆಲ್ಸ್ ಆಫ್ ಇಂಡಿಯನ್ ಡಯಾಸ್ಪೋರಿಕ್ ವುಮೆನ್ ನಾವೆಲಿಸ್ಟ್ಸ್" ಕುರಿತು ಇಮಾಮ ಮುನೀರ ಅಹ್ಮದ ಕೊರಬು ಅವರು ಸಲ್ಲಿಸಿದ್ದ ಮಹಾಪ್ರಬಂಧಕ್ಕೆಪಿಎಚ್‌ಡಿ ಪದವಿ ನೀಡಿದೆ. ಇಮಾಮ ಮುನೀರ ಅಹ್ಮದ ಕೊರಬು ಅವರು ಇಂಗ್ಲಿಷ್ ಅಧ್ಯಯನ ವಿಭಾಗದ ಪ್ರಾಧ್ಯಾಪಕರಾದ ಡಾ. ನಾಗರತ್ನಾ ವೀ ಪರಾಂಡೆ ಅವರ ಮಾರ್ಗದರ್ಶನದಲ್ಲಿ ಸಂಶೋಧನೆ ಕೈಗೊಂಡಿದ್ದರು. ಡಾಕ್ಟರೇಟ್ ಪದವಿ ಪಡೆದಿರುವ ಇಮಾಮ ಮುನೀರ ಅಹ್ಮದ ಕೊರಬು ಅವರನ್ನು ಕುಲಪತಿ ಪ್ರ. ಸಿ ಎಂ ತ್ಯಾಗರಾಜ್ ಅವರು ಕುಲಸಚಿವ ಪ್ರೊ. ರವೀಂದ್ರನಾಥ ಎನ್ ಕದಮ್ ಅವರು ಹಾಗೂ ಮೌಲ್ಯಮಾಪನ ಕುಲಸಚಿವರು ಅಭಿನಂದಿಸಿದ್ದಾರೆ.

## ಕೊಪ್ಪಳ, ಗಂಗಾವತಿ, ಕಲಬುರಗಿ, ಬೀದರ್ ಮಾರ್ಗಕ್ಕೆ ನೂತನ ಸಾರಿಗೆ ಆರಂಭ

**ಕೊಪ್ಪಳ :** ಕೊಪ್ಪಳ ಜಿಲ್ಲೆಯ ಜನಪ್ರತಿನಿಧಿಗಳು, ಸಾರ್ವಜನಿಕ ಪ್ರಯಾಣಿಕರ ಬೇಡಿಕೆಯ ಮೇರೆಗೆ ಕಲ್ಯಾಣ ಕನಾಟಕ ರಸ್ತೆ ಸಾರಿಗೆ ನಿಗಮದಿಂದ ಕೊಪ್ಪಳ, ಗಂಗಾವತಿ, ಕಲಬುರಗಿ, ಬೀದರ್ ಮಾರ್ಗದಲ್ಲಿ ನೂತನ ಪ್ರತಿಷ್ಠಿತ ರಾತ್ರಿ ಸಾರಿಗೆಯನ್ನು (ನಾನ್ ಎಸಿ ಸ್ಲೀಪರ್) ಪ್ರಾರಂಭಿಸಲಾಗಿದೆ.

ಸಾರಿಗೆ ಕಾರ್ಯಾಚರಣೆ ಸಮಯ: ಕಲ್ಯಾಣ ಕನಾಟಕ ರಸ್ತೆ ಸಾರಿಗೆ ನಿಗಮದಿಂದ ನಾನ್ ಎಸಿ ಸ್ಲೀಪರ್ ವಾಹನವು ಕೊಪ್ಪಳದಿಂದ 20.30 ಗಂಟೆಗೆ ಹಾಗೂ ಗಂಗಾವತಿಯಿಂದ 4.15 ಮತ್ತು 21.45ಕ್ಕೆ ಹೊರಡಲಿದ್ದು, ಕಲಬುರಗಿಗೆ 3.45ಕ್ಕೆ, ಬೀದರ್‌ಗೆ 6.45ಕ್ಕೆ ತಲುಪಲಿದೆ. ಕಲಬುರಗಿಯಿಂದ 22 ಮತ್ತು 4 ಗಂಟೆಗೆ ಹಾಗೂ ಬೀದರ್‌ದಿಂದ 18.30ಕ್ಕೆ ಹೊರಡಲಿರುವ ವಾಹನಗಳು ಗಂಗಾವತಿಗೆ 4 ಮತ್ತು 21.30ಕ್ಕೆ, ಕೊಪ್ಪಳಕ್ಕೆ 5.15ಕ್ಕೆ ತಲುಪಲಿದೆ.

ಕೊಪ್ಪಳ, ಗಂಗಾವತಿ, ಕಲಬುರಗಿ, ಬೀದರ್ ಮಾರ್ಗದ ಸಾರಿಗೆಗೆ ಮುಂಗಡ ಟಿಕೇಟ್ ಬುಕ್ ಮಾಡಲು ಸಂಸ್ಥೆಯ ಅಧೀಕೃತ ವೆಬ್‌ಸೈಟ್ www.ksrtc.in ನಲ್ಲಿ ಹಾಗೂ ಕಲ್ಯಾಣ ಕನಾಟಕ ರಸ್ತೆ ಸಾರಿಗೆ ನಿಗಮ ಕೊಪ್ಪಳ ವಿಭಾಗದ ಕೊಪ್ಪಳ, ಗಂಗಾವತಿ, ಕುಷ್ಟಗಿ, ಯಲಬುರ್ಗಾಗಳ ಮುಂಗಡ ಬುಕ್ಕಿಂಗ್ ಕೌಂಟರ್‌ಗಳಲ್ಲಿ ಮುಂಗಡ ಟಿಕೆಟ್ ಬುಕ್ ಮಾಡಬಹುದಾಗಿದೆ. ಸಾರ್ವಜನಿಕ ಪ್ರಯಾಣಿಕರು ಈ ಸಾರಿಗೆ ಸೌಲಭ್ಯದ ಸದಪಯೋಗ ಪಡೆದುಕೊಳ್ಳುವಂತೆ ಕಲ್ಯಾಣ ಕನಟಕ ರಸ್ತೆ ಸಾರಿಗೆ ನಿಗಮದ ಕೊಪ್ಪಳ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

"SIHI KAHI" Kannada Daily Morning, Editor, Owner, Publisher, Printer by MARUTI BASAVANTAPPA HOASAMANI Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at SUDIN PRINTERS, Sector No. 33, Shop No. 38 & 40, Opp. Ambedkar Bhavan, NAVANAGAR, BAGALKOT-587 101. Dist : Bagalkot, Karnataka State